# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 153 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 30–12–2023 ಶನಿವಾರ | ಪುಟ: 4 | ಬೆಲೆ : ರೂ.2–00

Volume - 01 Issue - 153 | Title- Code: KARKAN 28269 | Chitradurga | Date: 30-12-2023 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಕುವೆಂಪುರವರು ಸಾಹಿತ್ಯ ಲೋಕಕ್ಕೆ ನೀಡಿದ ಕೊಡುಗೆ ಅಮೂಲ್ಯ, ಅಪಾರ: ರಘುಮೂರ್ತಿ 2

ವೈಜ್ಞಾನಿಕ ಮನೋಭಾವ, ವೈಚಾರಿಕತೆ ರೂಢಿಸಿಕೊಳ್ಳಿ: ಉಪವಿಭಾಗಾಧಿಕಾರಿ 3

ಉದ್ದಿಮೆ ರೂಪದಲ್ಲಿ ಹೈನುಗಾರಿಕೆ ಕೈಗೊಳ್ಳಲು ರೈತರಿಗೆ ಸಲಹೆ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಪ್ರತಿಭೆ , ಶ್ರಮ ಮತ್ತು ಸ್ವಲ್ಪ ಅದೃಷ್ಟ ಇವುಗಳ ಮಿಶ್ರಣವೇ ಯಶಸ್ಸು.


» ಶುಭೋದಯ

## ಕೋಟೆ ನಾಡಿನ ಜನರಲ್ಲಿ ಆತಂಕ ಸೃಷ್ಟಿಸಿದ

# ಐವರ ಅಸ್ಥಿಪಂಜರ ಪ್ರಕರಣ







» ಚಿತ್ರದುರ್ಗ

ನಗರದ ಜೈಲ್ ರಸ್ತೆಯಲ್ಲಿ ಪಾಳುಬಿದ್ದ ಮನೆಯಲ್ಲಿ ಐದು ಅಸ್ಥಿಪಂಜರಗಳು ಪತ್ತೆಯಾಗಿವೆ. ಈ ಅಸ್ಥಿಪಂಜರಗಳು ಸಿಕ್ಕಿದ್ದು ಸ್ಥಳೀಯರಲ್ಲಿ ಆತಂಕ ಮನೆ ಮಾಡಿದ್ದು ಈ ಬಗ್ಗೆ ಪೊಲೀಸರು ಕಾರ್ಯಚಾರಣೆ ನಡೆಸಿದ್ದಾರೆ.

ಈ ಮನೆಯಲ್ಲಿ ಪಿಡಬ್ಲೂಡಿ ಇಂಜಿನಿಯರ್ ಜಗನ್ನಾಥ್ ರೆಡ್ಡಿ ಅವರಿಗೆ ಮನೆ ಸೇರಿದ್ದು ಹಾಗೂ ಅವರ ಕುಟುಂಬದವರು ವಾಸವವಾಗಿದ್ದರು ಎನ್ನುತ್ತಾರೆ ಸ್ಥಳೀಯರು.

ಜಗನ್ನಾಥರೆಡ್ಡಿಗೆ ಸುಮಾರು 80 ವರ್ಷ ವಯಸ್ಸಾಗಿತ್ತು. ಕಳೆದ ಕೆಲ ವರ್ಷಗಳಿಂದ ಅವರ ಕುಟುಂಬದ ಸದಸ್ಯರೆಲ್ಲಾ ಎಲ್ಲೂ ಕಾಣಿಸಿಕೊಂಡಿರಲಿಲ್ಲ. ಈಗ ಅವರು ವಾಸಿಸುತ್ತಿದ್ದ ಮನೆಯಲ್ಲಿ ಅಸ್ಥಿಪಂಜರಗಳು ಪತ್ತೆಯಾಗಿವೆ. ಹೀಗಾಗಿ, ಮನೆಯಲ್ಲಿ ಪತ್ತೆಯಾಗಿರುವ ಅಸ್ಥಿಪಂಜರಗಳು ಜಗನ್ನಾಥ್‌ರೆಡ್ಡಿ ಹಾಗೂ ಅವರ ಕುಟುಂಬದವರದ್ದೇ ಇರಬಹುದು ಎಂದು ಅವರ ಸಂಬಂಧಿಕರು ಶಂಕೆ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ಜಗನ್ನಾಥರೆಡ್ಡಿ ಅವರ ಸಂಬಂಧಿ ಪವನ್ ಕುಮಾರ್ ಅವರು ಚಿತ್ರದುರ್ಗ ಬಡಾವಣೆ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲು ಮಾಡಿದ್ದಾರೆ.

ಜಗನ್ನಾಥರೆಡ್ಡಿ, ಪತ್ನಿ ಪ್ರೇಮಕ್ಕ, ಪುತ್ರಿ ತ್ರಿವೇಣಿ, ಪುತ್ರರಾದ ಕೃಷ್ಣರೆಡ್ಡಿ, ನರೇಂದ್ರರೆಡ್ಡಿ ವಾಸವಾಗಿದ್ದರು. ಈಗ ಸಿಕ್ಕಿರುವುದು ಕೂಡಾ ಐದು ಅಸ್ಥಿಪಂಜರಗಳು. ಹೀಗಾಗಿ ಇವರೇ ಸಾವನ್ನಪ್ಪಿರಬಹುದು ಎಂದು ಶಂಕಿಸಲಾಗಿದೆ. ಮೂರು ವರ್ಷಗಳ ಹಿಂದೆ ಐವರೂ ಸಾವನ್ನಪ್ಪಿರಬಹುದು ಎಂದು ಹೇಳಲಾಗಿದೆ. ಆದ್ರೆ ಈ ಸಾವು ಯಾಕೆ ಆಯಿತು..? ಇದು ಕೊಲೆಯೋ ಅಥವಾ ಆತ್ಮಹತ್ಯೆಯೋ ಎಂಬುದರ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಮೊದಲಿಗೆ ಅಸ್ಥಿಪಂಜರಗಳನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಲು ನಿರ್ಧಾರ ಮಾಡಲಾಗಿದೆ.

ಈ ಬಗ್ಗೆ ಮಾತನಾಡಿರುವ ಸಂಬಂಧಿ ಪವನ್ ಕುಮಾರ್, ಜಗನ್ನಾಥ್‌ರೆಡ್ಡಿಯವರು ನಿವೃತ್ತ ಎಂಜಿನಿಯರ್ ಆಗಿದ್ದರು. ಅವರ ಕುಟುಂಬದ ಜೊತೆ ನಮ್ಮ ಕುಟುಂಬದ ಸಂಪರ್ಕ ಹಲವಾರು ವರ್ಷಗಳಿಂದ ಇರಲಿಲ್ಲ. ಅವರು ನಮ್ಮ ಮನೆಗೆ ಬರುತ್ತಿರಲಿಲ್ಲ. ನಾವು ಅವರ ಮನೆಗೆ ಹೋಗುತ್ತಿರಲಿಲ್ಲ. ಹಲವು ವರ್ಷಗಳಿಂದ ಜಗನ್ನಾಥರೆಡ್ಡಿ ಕುಟುಂಬದವರು ಎಲ್ಲೂ ನಮಗೆ ಕಂಡಿರಲಿಲ್ಲ ಎಂದು ಹೇಳಿದ್ದಾರೆ.

ಮನೆ ಪಾಳು ಬಿದ್ದಿದ್ದರಿಂದ ಆ ಮನೆ ಕಡೆ ಯಾರೂ ತಲೆ ಹಾಕಿರಲಿಲ್ಲ. ಆದ್ರೆ ಇತ್ತೀಚೆಗೆ ಕಳ್ಳರು ಆ ಮನೆಗೆ ನುಗ್ಗಿರುವ ಸಾಧ್ಯತೆ ಇದೆ. ಹೀಗಾಗಿ ಅದರ ಬಾಗಿಲು ಒಡೆಯಲಾಗಿದೆ. ಬಾಗಿಲು ಓಪನ್ ಇದ್ದಿದ್ದರಿಂದ ನಾಯಿಗಳು ಒಳಗೆ ನುಗ್ಗಿದ್ದು, ತಲೆ ಬುರಡೆಗಳನ್ನು ಅವು ಕಚ್ಚಿಕೊಂಡು ಬಂದು ಮನೆ ಹೊರಗೆ ಹಾಕಿವೆ. ಇದನ್ನು ಕಂಡ ಸ್ಥಳೀಯರೊಬ್ಬರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.ಹತ್ತು ವರ್ಷದ ಹಿಂದೆ ಈ ಮನೆಯಲ್ಲಿ ಜನ ಇರುವುದನ್ನು ನೋಡಿದ್ದೆ.

ಪುಟ 2

### ಅವರೇ ಸೂಸೈಡ್ ಮಾಡಿಕೊಂಡಿದ್ದಾರಾ..? ಯಾರಾದರೂ ಕೊಲೆ ಮಾಡಿದ್ದಾರಾ ಎಂಬುದೆಲ್ಲಾ ತನಿಖೆ ನಂತರ ತಿಳಿಯುತ್ತೆ

» ಚಿತ್ರದುರ್ಗ



ಚಿತ್ರದುರ್ಗದ ಚಳ್ಳಕೆರೆ ಗೇಟ್ ಜೈಲ್ ರಸ್ತೆಯ ಜಗನ್ನಾಥ ರೆಡ್ಡಿ ಎಂಬುವವರ ಮನೆಯಲ್ಲಿ ಐದು ಅಸ್ಥಿಪಂಜರ ಪತ್ತೆಯಾಗಿದೆ. ಪಾಳು ಬಿದ್ದ ಮನೆಯಲ್ಲಿ ಹೀಗೆ ಅಸ್ಥಿಪಂಜರ ಪತ್ತೆಯಾಗಿರುವುದು ಎಲ್ಲರಿಗೂ ದಿಗ್ಭ್ರಮೆ ಮೂಡಿಸಿದೆ. ಪೊಲೀಸರು ಎಲ್ಲಾ ರೀತಿಯ ತನಿಖೆಯನ್ನು ನಡೆಸುತ್ತಿದ್ದಾರೆ. ಈ ಸಂಬಂಧ ಗೃಹ ಸಚಿವ ಜಿ ಪರಮೇಶ್ವರ್ ಪ್ರತಿಕ್ರಿಯೆ ನೀಡಿದ್ದಾರೆ. ಮನೆಯಲ್ಲಿ ವಾಸವಿದ್ದವರು ಯಾರು ಎಂಬೆಲ್ಲಾ ಮಾಹಿತಿಯನ್ನು ಪೊಲೀಸರು ಕಲೆ ಹಾಕುತ್ತಿದ್ದಾರೆ. ಆ ಮನೆಯಲ್ಲಿ ಯಾರಿದ್ದರು ಎಂಬುದನ್ನೆಲ್ಲಾ ಕಲೆ ಹಾಕಲಾಗುತ್ತಿದೆ. ಅವರೇ ಸೂಸೈಡ್ ಮಾಡಿಕೊಂಡಿದ್ದಾರಾ..? ಯಾರಾದರೂ ಕೊಲೆ ಮಾಡಿದ್ದಾರಾ ಎಂಬುದೆಲ್ಲಾ ತನಿಖೆ ನಂತರ ತಿಳಿಯುತ್ತದೆ. ಈಗಾಗಲೇ ಅಸ್ಥಿಪಂಜರದ ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ವರದಿ ಬಳಿಕ ಸತ್ಯಾಂಶ ತಿಳಿಯಲಿದೆ ಎಂದಿದ್ದಾರೆ.

## ವೈದ್ಯಕೀಯ ವರದಿ ಬಂದ ನಂತರ ಸಾವಿನ ನಿಖರತೆ: ಎಸ್ಪಿ

» ಚಿತ್ರದುರ್ಗ



ನಗರದ ಹಳೆ ಬೆಂಗಳೂರು ರಸ್ತೆಯ ಮನೆಯಲ್ಲಿ ಅಸ್ಥಿ ಪಂಜರ ಇರುವ ಮಾಹಿತಿ ನಿನ್ನೆ ಸಂಜೆ ಪೊಲೀಸರಿಗೆ ಬಂದಿದ್ದರ ಹಿನ್ನೆಲೆಯಲ್ಲಿ ನಿಗೂಢ ಶವ ಪತ್ತೆ ಕೇಸ್ ವಿಚಾರವಾಗಿ ಚಿತ್ರದುರ್ಗದ ಖಕ ಕಚೇರಿಯಲ್ಲಿ ಮಾಹಿತಿ ನೀಡಿರುವ ಎಸ್ಪಿ ಧರ್ಮೇಂದರ್ ಕುಮಾರ್ ಮೀನಾ ಅವರು ನಮ್ಮ ಸಿಪಿಐ ನಹಿಂ ಟೀಂ ಹೋಗಿ ನೋಡಿದಾಗ ಅಸ್ಥಿಪಂಜರಗಳು ಇರುವುದು ಖಚಿತವಾಗಿತ್ತು.ಪರಿಪೂರ್ಣವಾಗಿ ಚೆಕ್ ಮಾಡಿದಾಗ ಮೊದಲು 3 ಅಸ್ಥಿ ಪಂಚರ ಕಂಡಿತ್ತು. ಆಗ ನಮ್ಮ ಈಖಐ ತಂಡ ಕೂಡಾ ಆಗಮಿಸಿತ್ತು. ರಾತ್ರಿ ಈಖಐ ತಂಡ ಪರಿಶೀಲನೆ ಬಳಿ ಮತ್ತೆ ಇಬ್ಬರ ಅಸ್ಥಿ ಪಂಚರ ದೊರಕಿತು. ಒಟ್ಟು ಐದು ಅಸ್ಥಿ ಪಂಚರ ನಮಗೆ ಖಚಿತವಾಗಿತ್ತು. ಡಿಐಜಿ ತ್ಯಾಗರಾಜನ್ ಅವರು ಕೂಡಾ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಸುಮಾರು ವರ್ಷಗಳಿಂದ ಮನೆ ಪಾಳು ಬಿದ್ದಿದೆ.ಜಗನ್ನಾಥ ರೆಡ್ಡಿ, ಪ್ರೇಮರೆಡ್ಡಿ, ತ್ರೀವೇಣಿ ರೆಡ್ಡಿ, ಕೃಷ್ಣರೆಡ್ಡಿ, ನರೇಂದ್ರ ರೆಡ್ಡಿ ವಾಸ ಮಾಡುತ್ತಿದ್ದರು ಎಂದು ತಿಳಿದಿದ್ದು ಇವರು ಯಾರ ಜೊತೆ ಕೂಡಾ ಹೆಚ್ಚು ಸಂಪರ್ಕ ಇರಲಿಲ್ಲ. ಇದರಲ್ಲಿ ಕೇವಲ ಕೃಷ್ಣರೆಡ್ಡಿ ಮಾತ್ರ ಹೊರಗೆ ಹೋಗುತ್ತಿದ್ದರು. ಉಳಿದ ನಾಲ್ಕು ಮಂದಿ ಕೂಡಾ ಮನೆಯಲ್ಲೇ ಉಳಿಯುತ್ತಿದ್ದರು. ಸಂಬಂಧಿಕರು ಕೂಡಾ ತುಂಬಾ ದಿನಗಳಿಂದ ಕಂಡಿಲ್ಲ ಎಂದು ಹೇಳಿದ್ದಾರೆ. ನಾವು ಕೂಡಾ ಹೆಚ್ಚಿನ ತನಿಖೆ ನಡೆಸಿದ್ದೇವೆ.ಅಕ್ಟೋಬರ್ 2019 ರಲ್ಲಿ ಇವರ ಕುಟುಂಬ ಯಾರ ಸಂಪರ್ಕದಲ್ಲಿ ಇರಲಿಲ್ಲ. ಪವನ್ ಎಂಬ ಸಂಬಂಧಿಯಿಂದ ನಾವು ಕೇಸ್ ತೆಗೆದುಕೊಂಡಿದ್ದೇವೆ.ಬಡಾವಣೆ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲು ಮಾಡಿದ್ದೇವೆ. ಬಸವೇಶ್ವರ ಆಸ್ಪತ್ರೆಗೆ ನಾವು ಶವ ರವಾನೆ ಮಾಡಿದ್ದೇವೆ. ವಿಧಿ ವಿಜ್ಞಾನ ಹಿರಿಯ ತಜ್ಞರು ಬರಬೇಕಿದೆ. ಮತ್ತೊಂದು ಬಾರಿ ಈಖಐ ಗೂ ಕೂಡಾ ಕಳಿಸಿದ್ದೇವೆ. ಇನ್ನೂ ಕೆಲ ಸಾಕ್ಷಿಗಳಿಗಾಗಿ ನಾವು ತನಿಖೆ ನಡೆಸುತ್ತಿದ್ದೇವೆ. ಮರಣೋತ್ತರ ಪರೀಕ್ಷೆ ನಡೆಸಲಾಗುತ್ತದೆ, ಇಲ್ಲಿನ ವರದಿ ಕೂಡಾ ಬರಬೇಕಿದೆ.ಎಲ್ಲಾ ವರದಿ ಬಂದ ಕೂಡಲೇ ವೈದ್ಯರಿಂದ ಸಾವಿನ ನಿಖರತೆ ಲಭ್ಯವಾಗುತ್ತದೆ.ಮರಣೋತ್ತರ ಪರೀಕ್ಷೆ ಇನ್ನು ಕೂಡಾ ಮುಗಿದಿಲ್ಲ. ಈಖಐ ವರದಿ ಕೂಡಾ ನಮಗೆ ಇನ್ನೂ ಕೈ ಸೇರಿಲ್ಲ. ಮನೆ ಮಾಲೀಕರು ಹಾಗೂ ಮನೆಯ ವಾಸ ಇದ್ದರು ಮಾಹಿತಿ ಈ ಶವಗಳೇ ಆಗಿದೆ.ಮೇಲ್ನೋಟಕ್ಕೆ ಈ ಶವ ಐದು ಕೂಡಾ ಅವರದ್ದೇ ಎಂದು ಊಹೆ ಮಾಡಿದ್ದೇವೆ ಎಂದು ತಿಳಿಸಿದ್ದಾರೆ.

**ಫಾಸ್ಟ್ ನ್ಯೂಸ್**

### ಚಿತ್ರದುರ್ಗ ಜಿಲ್ಲೆಯಲ್ಲಿ 4 ಜನರಿಗೆ ಕೋವಿಡ್ ದೃಢ

» ಚಿತ್ರದುರ್ಗ

ಕೋಟೆ ನಾಡಿನಲ್ಲಿ ಕೋವಿಡ್ (covid19)ಅಬ್ಬರ ಶುರುವಾಗಿದೆ. ಜಿಲ್ಲೆಯಲ್ಲಿ ನಾಲ್ವರಿಗೆ ಕೋವಿಡ್ ಸೋಂಕು ಪತ್ತೆಯಾಗಿದ್ದು ಇದರಿಂದ ಜಿಲ್ಲೆಯಲ್ಲಿ ಮತ್ತೆ ಕೋವಿಡ್ ಆತಂಕ ಪ್ರಾರಂಭವಾಗಿದೆ.ಇಂದು ಸಹ 4 ಮಂದಿಗೆ ಜೆಎನ್–1 ಸೋಂಕು ದೃಢಪಟ್ಟಿದೆ. ಪತ್ತೆಯಾಗಿದೆ.ಉಳಿದಂತೆ ಹಿರಿಯೂರು, ಹೊಳಲ್ಕೆರೆ ನಲ್ಲಿ ಯಾವುದೇ ಪ್ರಕರಣಗಳು ಪತ್ತೆಯಾಗಿಲ್ಲ ಎಂದು ಆರೋಗ್ಯ ಇಲಾಖೆ ದೃಢಪಡಿಸಿದೆ.

**ಜಿಲ್ಲೆಯ ಮಾಹಿತಿ**

| ತಾಲೂಕು | ಪ್ರಕರಣ |
|---|---|
| ಚಿತ್ರದುರ್ಗ | 0 |
| ಚಳ್ಳಕೆರೆ | 3 |
| ಮೊಳಕಾಲ್ಮೂರು | 0 |
| ಹೊಸದುರ್ಗ | 1 |
| ಹಿರಿಯೂರು | 0 |
| ಹೊಳಲ್ಕೆರೆ | 0 |



ಮಾಸ್ಕ್ ಧರಿಸಿ | ದೈಹಿಕ ಅಂತರ ಪಾಲಿಸಿ | ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ

### ಪಿಎಂ ಆವಾಸ್: 4 ಕೋಟಿಗೂ ಅಧಿಕ ಮನೆಗಳ ನಿರ್ಮಾಣ; ಪ್ರಹ್ಲಾದ್ ಜೋಶಿ



» ದಾವಣಗೆರೆ

ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಕಳೆದ 10 ವರ್ಷಗಳಲ್ಲಿ ದೇಶದ ಬಡವರಿಗಾಗಿ 4 ಕೋಟಿಗೂ ಅಧಿಕ ಮನೆಗಳನ್ನು ನಿರ್ಮಾಣ ಮಾಡಿಕೊಡಲಾಗಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳು, ಕಲ್ಲಿದ್ದಲು ಮತ್ತು ಗಣಿ ಖಾತೆ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದರು.

ದಾವಣಗೆರೆ ತಾಲ್ಲೂಕಿನ ಹೆಮ್ಮನಬೇತೂರು ಗ್ರಾಮದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ವಿಕಸಿತ ಭಾರತ ಸಂಕಲ್ಪ ಯಾತ್ರೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಈ ಹಿಂದೆ 3.50 ಲಕ್ಷ ಮನೆಗಳನ್ನು ನಿರ್ಮಾಣ ಮಾಡಲಾಗಿದೆ. ಆದರೆ ಕಳೆದ 10 ವರ್ಷಗಳಲ್ಲಿ ಕೇಂದ್ರ ಸರ್ಕಾರ 4 ಕೋಟಿಗೂ ಅಧಿಕ ಕುಟುಂಬಗಳಿಗೆ ಶಾಶ್ವತ ಸೂರು ಕಲ್ಪಿಸಿದೆ. ಈ ಮೂಲಕ ಜನಪರ ಕಾರ್ಯಕ್ರಮಗಳನ್ನು ನಡೆಸುತ್ತಾ ಬಂದಿದೆ ಎಂದರು. ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿ ಬಡ ಕುಟುಂಬಗಳಿಗೆ ಉಚಿತ ಎಲ್.ಪಿ.ಜಿ ಸಂಪರ್ಕ ಕಲ್ಪಿಸಲಾಗಿದೆ. ಮುಂದಿನ ಮೂರು ವರ್ಷಗಳಲ್ಲಿ ಭಾರತ ವಿಶ್ವದ ಮೂರನೇ ದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲಿದೆ ಎಂದ ಅವರು, ಭವಿಷ್ಯದಲ್ಲಿ ದೇಶದ ಕೃಷಿ ಕ್ಷೇತ್ರ ಸಂಪೂರ್ಣ ತಾಂತ್ರಿಕತೆಯಗಳ ಮೇಲೆ ನಡೆಯಲಿದೆ. ಇದರ ಭಾಗವಾಗಿ ಬೆಳೆಗಳಿಗೆ ಔಷಧಿ ಸಿಂಪರಣೆಗೆ 15 ಸಾವಿರ ಡ್ರೋಣ್ ಗಳನ್ನು ದೇಶದ ಸ್ತ್ರೀ ಶಕ್ತಿ ಸಂಘಗಳಿಗೆ ಶೇ.80 ರಷ್ಟು ಸಹಾಯಧನದೊಂದಿಗೆ ನೀಡಲಿದೆ. ಈ ಯೋಜನೆಗೆ ನಮೋ ಡ್ರೋಣ್ ದೀದಿ ಎಂದು ಹೆಸರಿಸಲಾಗಿದೆ. ಈ ಡ್ರೋಣ್ ಸಹಾಯದಿಂದ ನ್ಯಾನೋ ಯೂರಿಯಾವನ್ನು ದಿನಕ್ಕೆ 100 ಎಕರೆ ಸಿಂಪರಣೆ ಮಾಡಬಹುದಾಗಿದೆ.

ಪುಟ 4

**ಪ್ರಮುಖ ಸುದ್ದಿ**


### ರೈತರ ದಿನಾಚರಣೆಯಲ್ಲಿ ಶಾಸಕ ಟಿ.ರಘುಮೂರ್ತಿ ಸಲಹೆ

# ರೈತರು ಆಧುನಿಕ ಕೃಷಿ ತಂತ್ರಗಳನ್ನು ಅಳವಡಿಸಿಕೊಳ್ಳಿ

» ಚಳ್ಳಕೆರೆ

ರೈತ ದೇಶದ ಬೆನ್ನೆಲುಬು ಎನ್ನುವುದರಲ್ಲಿ ಎರಡು ಮಾತಿಲ್ಲ, ಜೊತೆಯಲ್ಲಿ ರೈತ ಕೇವಲ ದೇಶದ ಬೆನ್ನೆಲುಬಲ್ಲ, ನಮ್ಮೆಲ್ಲರ ಬದುಕಿನ ಬೆನ್ನೆಲುಬಾಗಿದ್ದಾನೆ. ದೇಶಕಾಯುವ ಸೈನಿಕರಂತೆ ನಮ್ಮ ದಿನನಿತ್ಯದ ಬದುಕಿಗೆ ಆಧಾರವಾಗಿರುವ ಅನ್ನ, ಆಹಾರ ನೀಡುವ ಶಕ್ತಿ ರೈತರನಿಗೆ ಇದೆ. ರೈತ ನೂತನ ಆಧುನಿಕ ಕೃಷಿ ಪದ್ದತಿಗಳನ್ನು ಅಳವಡಿಸಿಕೊಂಡು ಸಾಧನೆಯತ್ತ ದೃಢ ಹೆಜ್ಜೆ ಇಡಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಕೃಷಿ ಇಲಾಖೆ ಆವರಣದಲ್ಲಿ ರಾಷ್ಟ್ರೀಯ ರೈತ ದಿನಾಚರಣೆ, ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿದ್ದಲ್ಲದೆ, ಇಂದು ವಿಶ್ವಕವಿ ಕುವೆಂಪುರವರ ದಿನಾಚರಣೆ ಈ ಕಾರ್ಯಕ್ರಮ ಆಯೋಜಿಸಿರುವುದು ಹೆಚ್ಚು ಸಂತಸ ತಂದಿದೆ. ಕೃಷಿ ಇಲಾಖೆ ಎಲ್ಲಾ ಹಂತದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ರೈತರ ಧ್ವನಿಯಾಗಿ ಕಾರ್ಯನಿರ್ವಹಿಸಿದರೆ ಮಾತ್ರ ರೈತ ನೆಮ್ಮದಿ ಬದುಕು ಸಾಧಿಸಲು ಸಾಧ್ಯ. ಪ್ರತಿಯೊಬ್ಬ ರೈತನ ಆಗೂಹೋಗುಗಳ ಬಗ್ಗೆ ಚಿಂತನೆ ನಡೆಸಬೇಕಿದೆ. ಇತ್ತೀಚಿನ ದಿನಗಳಲ್ಲಿ ಹಲವಾರು ಕಾರಣಗಳಿಂದ ಭೂಮಿ ತನ್ನ ಸತ್ವವನ್ನು ಕಳೆದುಕೊಳ್ಳುತ್ತಿದ್ದು ಇದನ್ನು ಪಡೆಯುವತ್ತ ಕೃಷಿ ವಿಜ್ಞಾನಿಗಳ ಸಹಕಾರವನ್ನು ರೈತರು ಪಡೆಯಬೇಕು. ಪ್ರಸ್ತುತ ರಾಜ್ಯ ಸರ್ಕಾರ ರೈತ ಸರ್ವತೋಮುಖ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದೆ. ವಿಪರ್ಯಾಸವೆಂದರೆ ನಮ್ಮ ಕ್ಷೇತ್ರದಲ್ಲಿ ರೈತರಿಗೆ ಪ್ರಧಾನಮಂತ್ರಿ ಫಸಲ್ ಬೀಮಾ ಯೋಜನೆಯಡಿ ಪಿ.ಮ ಹದೇವಪುರ ಪಂಚಾಯಿತಿಯಲ್ಲಿ 85 ಲಕ್ಷ ಹಣ ದುರುಪಯೋಗವಾಗಿದೆ. ಇಂತಹ ಘಟನೆಗಳನ್ನು ಸಂಪೂರ್ಣವಾಗಿ ತೊಡೆದು ಹಾಕಲು ಅಧಿಕಾರಿಗಳು ಸಂಕಲ್ಪ ಮಾಡಬೇಕು. ಕಳೆದ 2022–23ನೇ ಸಾಲಿನಲ್ಲಿ ಖಾಸಗಿ ಬೆಳೆ ವಿಮೆ ಕಂಪನಿಗಳು 11.500 ಸಾವಿರ ಕೋಟಿ ಬೆಳೆ ವಿಮೆ ರೈತರಿಂದ ಪಡೆದಿದ್ದು 2600 ಕೋಟಿ ಲಾಭವನ್ನು ಗಳಿಸಿವೆ ಎಂದರು.




ಪುಟ 2





# ಬಾಲ್ಯ ವಿವಾಹ ತಡೆಗಟ್ಟಲು ಅಗತ್ಯ ಕ್ರಮ

» **ದಾವಣಗೆರೆ**

ಬಾಲ್ಯ ವಿವಾಹಗಳು ಹೆಚ್ಚಾಗಿರುವ ಪ್ರದೇಶಗಳಲ್ಲಿ ಮತ್ತು ಶಾಲಾ-ಕಾಲೇಜುಗಳಲ್ಲಿ ಬಾಲ್ಯ ವಿವಾಹತಡೆಟ್ಟುವ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಿ ಬಾಲ್ಯ ವಿವಾಹ ಮುಕ್ತ ಸಮಾಜಕ್ಕೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಬಾಲ್ಯ ವಿವಾಹ ತಡೆ, ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ-2005 ಯೋಜನೆ ಹಾಗೂ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

18 ರಿಂದ 19 ವರ್ಷದ ಒಳಗಿನ ಹೆಣ್ಣು ಮಕ್ಕಳು ಗರ್ಭಿಣಿಯಾಗಿ ನೊಂದಣಿಯಾದರೆ ಅದನ್ನು ಎಂ.ಎಲ್.ಸಿ ಪ್ರಕರಣವೆಂದು ದಾಖಲು ಮಾಡಬೇಕು. ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ನಗರ ಹಾಗೂ ಗ್ರಾಮೀಣ ಪ್ರದೇಶಗಳ ಮನೆ-ಮನೆಗೂ ತೆರಳಿ ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಹೆಚ್ಚಿನ ಅರಿವು ಮೂಡಿಸಬೇಕು. ಜಿಲ್ಲೆಯಲ್ಲಿ ಐದನೇ ತರಗತಿ ಮೇಲ್ಪಟ್ಟು ಶಾಲಾ-ಕಾಲೇಜು ತೊರೆದವರನ್ನು ಮರಳಿ ಶಾಲೆಗೆ ಕರೆತರುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು ಎಂದರು.

ದಾವಣಗೆರೆ ತಾಲ್ಲೂಕಿನಲ್ಲಿ 17,



ಜಗಳೂರು 3, ಹರಿಹರ 5, ಹೊನ್ನಾಳಿ 3 ಮತ್ತು ಚನ್ನಗಿರಿ 13 ಬಾಲ್ಯವಿವಾಹದ ಪ್ರಕರಣಗಳು ಒಳಗೊಂಡಂತೆ ಒಟ್ಟು 41 ಪ್ರಕರಣಗಳಲ್ಲಿ 38 ಬಾಲ್ಯವಿವಾಹಗಳನ್ನು ತಡೆಯಲಾಗಿದೆ.

3 ವಿವಾಹಗಳು ನಡೆದಿದ್ದು, ಎಫ್.ಐ.ಆರ್ ದಾಖಲಾಗಿದೆ. ಬಾಲ್ಯ ವಿವಾಹ ನಿಷೇಧದ ಕುರಿತು ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಈಗಾಗಲೇ 235 ಅರಿವು ಕಾರ್ಯಕ್ರಮಗಳನ್ನು ಮಾಡಲಾಗಿದ್ದು, ಬಾಲ್ಯವಿವಾಹ ಪ್ರಕರಣಗಳು ಹೆಚ್ಚಾಗಿರುವ ಚನ್ನಗಿರಿ ಮತ್ತು ದಾವಣಗೆರೆ ತಾಲ್ಲೂಕುಗಳಲ್ಲಿ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದರು.

ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ : ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ ಕುರಿತು ಸಾರ್ವಜನಿಕರಲ್ಲಿ ಮಾಹಿತಿ ಕೊರತೆಯಾಗಿರುವುದರಿಂದ ಕಾಯ್ದೆಯ ಸೌಲಭ್ಯದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ನಡೆಸಲಾಗಿದೆ. ಜಿಲ್ಲೆಯಲ್ಲಿ ಕೌಟುಂಬಿಕ ದೌರ್ಜನ್ಯದಡಿ ನ್ಯಾಯಾಲಯದಲ್ಲಿ ನೇರವಾಗಿ 71 ಪ್ರಕರಣಗಳು ದಾಖಲಾಗಿದ್ದು, ವಿಚಾರಣೆ ಹಂತದಲ್ಲಿದ್ದು, ಯಾವುದೇ ಪ್ರಕರಣಗಳಿಗೆ ಮಧ್ಯಂತರ ಪರಿಹಾರ ನೀಡಿರುವುದಿಲ್ಲ.

**ಸ್ವಾಧಾರ ಕೇಂದ್ರ:** ಏಪ್ರಿ[illegible]ನಿಂದ ನವಂಬರ್ ಅಂತ್ಯದವರೆಗೆ ಜಿಲ್ಲೆಯಲ್ಲಿನ ಸ್ವಾಧಾರ ಗೃಹಗಳಲ್ಲಿ ಒಟ್ಟು 165 ಜನ ಮಹಿಳೆಯರು ದಾಖಲಾಗಿದ್ದು, ಅದರಲ್ಲಿ 16 ಮಹಿಳೆಯರು ಸ್ವಾವಲಂಭಿಯಾಗಿ ಜೀವನ ನಡೆಸಲು ಇಚ್ಚಿಸಿದ್ದು, ಅವರಿಗೆ ಟೈಲರಿಂಗ್,ಎಂಬ್ರಾಯಿಡರಿ,ಕಂಪ್ಯೂಟರ್ ಹಾಗೂ ಇನ್ನಿತರ ಕೌಶಲ್ಯಗಳ ತರಬೇತಿ ನೀಡಿ ಸ್ವಾವಲಂಭಿಗಳಾಗಿ ಬದುಕಲು ಅವಕಾಶ ಕಲ್ಪಿಸಲಾಗಿದೆ

98 ಜನ ಮಹಿಳೆಯರು ಮಾತುಕತೆಯ ಮೂಲಕ ಕುಟುಂಬದೊಂದಿಗೆ ಉತ್ತಮವಾಗಿ ಜೀವನ ನಡೆಸುತ್ತಿದ್ದು, ಪ್ರಸ್ತುತ 51 ಫಲಾನುಭವಿಗಳು ಸಂಸ್ಥೆಯಲ್ಲಿ ಆಶ್ರಯ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

**ಮಕ್ಕಳ ರಕ್ಷಣಾ ಘಟಕ:** ಜಿಲ್ಲೆಯಲ್ಲಿ ಹೆಚ್.ಐ.ವಿ, ಕೋವಿಡ್ ಹಾಗೂ ಇನ್ನಿತರ ಅಹಿತಕರ ಘಟನೆಗಳಿಂದ ತಂದೆ ತಾಯಿಯನ್ನು ಕಳೆದುಕೊಂಡ ಮಕ್ಕಳಿಗೆ ಡಿ.ಬಿ.ಟಿ ಮುಖಾಂತರ ನೇರವಾಗಿ ಸಹಾಯಧನ ನೀಡಲಾಗಿದೆ.

ಜಿಲ್ಲೆಯಲ್ಲಿ 2012ರಿಂದ ಇಲ್ಲಿಯವರೆಗೆ ಪೋಕ್ಸೋ ಕಾಯ್ದೆಯಡಿ 653 ಪ್ರಕರಣಗಳು ದಾಖಲಾಗಿದ್ದು, 386 ಪ್ರಕರಣಗಳು ವಿಲೇವಾರಿಯಾಗಿವೆ. 22 ತನಿಖೆ ಹಾಗೂ 215 ಪ್ರಕರಣಗಳು ವಿಚಾರಣೆ ಹಂತದಲ್ಲಿವೆ. ಬಾಲ ನ್ಯಾಯ ಮಂಡಳಿಯಲ್ಲಿ ದಾಖಲಾದ ಮಕ್ಕಳಿಗೆ ಅಗತ್ಯ ಶಿಕ್ಷಣ ವ್ಯವಸ್ಥೆ ಕಲ್ಪಿಸಬೇಕು. ಪ್ರತಿ ಶಾಲಾ-ಕಾಲೇಜುಗಳಲ್ಲಿ ಒಂಬತ್ತನೇ ತರಗತಿ ಮೇಲ್ಪಟ್ಟವರಿಗೆ ಪೊಕ್ಸೋ ಕಾಯ್ದೆ ಕುರಿತಂತೆ ಅರಿವು ಮೂಡಿಸಬೇಕು. ಮಕ್ಕಳ ತುರ್ತು ಅಗತ್ಯಗಳಿಗೆ 1098 ಅಥವಾ 112 ಗೆ ಸಂಪರ್ಕಿಸುವಂತೆ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಬಾಲ ನ್ಯಾಯ ಮಂಡಳಿಯಲ್ಲಿ ಜುಲೈ 2023 ರಿಂದ ನವಂಬರ್ ಅಂತ್ಯದವರೆಗೆ ಒಟ್ಟು 111 ಪ್ರಕರಣಗಳು ದಾಖಲಾಗಿದ್ದು, ಇದರಲ್ಲಿ 55 ಪ್ರಕರಣನಗಳು ಇತ್ಯರ್ಥವಾಗದೇ ಬಾಕಿ ಉಳಿದಿವೆ.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣನಾಯ್ಕ್, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಜಯಕುಮಾರ್ ಎಂ. ಸಂತೋಷ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ವಾಸಂತಿ ಉಪ್ಪಾರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಅಧಿಕಾರಿ ರಾಜಕುಮಾರ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು

## ಫಾಸ್ಟ್ ನ್ಯೂಸ್

### ಕೋಟೆ ನಾಡಿನ ಜನರಲ್ಲಿ ಆತಂಕ ಸೃಷ್ಟಿಸಿದ ಐವರ ಅಸ್ಥಿಪಂಜರ ಪ್ರಕರಣ

» ಮೊದಲ ಪುಟದಿಂದ

ಈ ಮನೆಯಲ್ಲಿ ವಯಸ್ಸಾದವರು, ನಡೆಯಲಾರದವರು ಇದ್ದಿದ್ದನ್ನು ನೋಡಿದ್ದೆ. ಆಗಾಗ ಹಾಲು ತರಲು ಹೊರಬರುತ್ತಿದ್ದದ್ದು ಬಿಟ್ಟರೆ ಅವರು ಎಲ್ಲೂ ಹೊರಗೆ ಕಾಣಿಸಿಕೊಳ್ಳುತ್ತಿರಲಿಲ್ಲ. ಹತ್ತು ವರ್ಷದ ಹಿಂದೆ ಈ ಮನೆ ಮುಂದೆ ಚರಂಡಿ ರಿಪೇರಿ ಮಾಡಿದ್ದೆವು. ಈ ವೇಳೆ ಸಂದರ್ಭದಲ್ಲಿಯೂ ಈ ಮನೆಯಲ್ಲಿ ಯಾರೂ ಇರಲಿಲ್ಲ. ಹೀಗಾಗಿ ಹತ್ತು ವರ್ಷದ ಹಿಂದೆಯೇ ಇವರು ಸಾವನ್ನಪ್ಪಿರಬಹುದು ಎಂದು ವಾಲ್‌ಮನ್ ಆಗಿ ಕೆಲಸ ಮಾಡುವ ಪರಶುರಾಮ್ ಎಂಬುವವರು ಹೇಳಿಕೊಂಡಿದ್ದಾರೆ. ಇನ್ನು ಮಾಹಿತಿ ಪ್ರಕಾರ ಮನೆಯಲ್ಲಿ 2019ರ ಕ್ಯಾಲೆಂಡರ್ ಈ ಮನೆಯಲ್ಲಿದೆ. ಹೀಗಾಮೊದಲಿಗೆ ನಾ ಸಮಯದಲ್ಲಿ ಮನೆಯಲ್ಲಿದ್ದವರೆಲ್ಲಾ ಸಾವನ್ನಪ್ಪಿರಬಹುದು ಎಂದು ಶಂಕಿಸಲಾಗಿದೆ.

### ರೈತರು ಆಧುನಿಕ ಕೃಷಿ ತಂತ್ರಗಳನ್ನು ಅಳವಡಿಸಿಕೊಳ್ಳಿ




» ಮೊದಲ ಪುಟದಿಂದ

ಪ್ರಾಸ್ತಾವಿಕವಾಗಿ ಮಾತನಾಡಿದ ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ಮಂಜುನಾಥ, ರಾಷ್ಟ್ರದ ಮಾಜಿ ಪ್ರಧಾನಮಂತ್ರಿ ದಿವಂಗತ ಚೌಧರಿಶರಣ್‌ಸಿಂಗ್‌ರವರಜನ್ಮದಿನಾಚರಣೆಯನ್ನು ರಾಷ್ಟ್ರೀಯ ರೈತ ದಿನಾಚರಣೆಯನ್ನಾಗಿ ಆಚರಣೆ ಮಾಡುತ್ತಿದ್ದೇವೆ.1938ರಲ್ಲಿ ದೇಶದಲ್ಲಿ ಕೃಷಿ ಕಾಯ್ದೆ ಜಾರಿಗೆ ತಂದ ಮೊದಲ ಪ್ರಧಾನ ಚೌಧರಿಶರಣ್‌ಸಿಂಗ್. ನಮ್ಮ ದೇಶದ ಕೃಷಿಆಧಾರಿತ ದೇಶವಾಗಿದೆ. ಕೃಷಿಯನ್ನು ವೈಜ್ಞಾನಿಕ ದೃಷ್ಟಿಯಿಂದ ನೋಡಿದರೆ ಮಾತ್ರ ರೈತರು ಅಭಿವೃದ್ದಿಯತ್ತ ಸಾಗಬಹುದು ಎಂದರು. ಕಾರ್ಯಕ್ರಮದಲ್ಲಿ ಆತ್ಮಯೋಜನೆಯಡಿ ಪ್ರಗತಿಪರ ರೈತರಾದ ಎ.ಚಿಕ್ಕಣ್ಣ, ಮಹಂತೇಶ್, ಎಂ.ವಿಜಯಕುಮಾರ್, ಬಿ.ತಿಪ್ಪೇಸ್ವಾಮಿ, ಮಾರಯ್ಯರವರನ್ನು ಶಾಸಕರು ಸನ್ಮಾನಿಸಿದರು. ಕಾರ್ಯಕ್ರಮ ಉದ್ದೇಶಿಸಿ ರೈತ ಸಂಘದ ಹಿರಿಯ ಮುಖಂಡರಾದ ಸೋಮಗುದ್ದುರಂಗಸ್ವಾಮಿ, ಕೆ.ಪಿ.ಭೂತಯ್ಯ, ಆರ್.ಎ.ದಯಾನಂದಮೂರ್ತಿ, ಚಿಕ್ಕಣ್ಣ, ದೊಡ್ಡಉಳ್ಳಾರ್ತಿಕರಿಯಣ್ಣ ಮುಂತಾದವರು ಮಾತನಾಡಿದರು. ಕಾರ್ಯಕ್ರಮದಲ್ಲಿ ರೆಡ್ಡಿಹಳ್ಳಿ ಶಿವಣ್ಣ, ಜಿಲ್ಲಾ ಪಂಚಾಯಿತಿ ಕೆಡಿಪಿ ನಾಮಿನಿ ಸದಸ್ಯ ಓ.ರಂಗಸ್ವಾಮಿ, ಕೃಷಿ ವಿಜ್ಞಾನಿ ಓಂಕಾರಮೂರ್ತಿ, ಶ್ರೀಕಂಠಪ್ಪ, ಬೊಪ್ಪಣ್ಣ, ಬಿ.ಟಿ.ರಮೇಶ್‌ಗೌಡ, ಜಡೇಕುಂಟೆ ಮಂಜುನಾಥ, ತಿಪ್ಪೇಸ್ವಾಮಿ, ನಾಗೇಂದ್ರಪ್ಪ, ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ, ರೇಷ್ಮ ಅಧಿಕಾರಿ ಮೋಹನ್, ಪಶು ಅಧಿಕಾರಿ ರೇವಣ್ಣ, ಉಪಕೃಷಿ ನಿರ್ದೇಶಕ ಡಾ.ಬಿ.ಎನ್.ಪ್ರಭಾಕರ, ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್, ತಿಪ್ಪೇಸ್ವಾಮಿ, ರಾಮಕೃಷ್ಣಪ್ಪ ಮುಂತಾದವರು ಉಪಸ್ಥಿತರಿದ್ದರು.

### ಪಾವಗಡ ರಸ್ತೆಯಲ್ಲಿ ಆಕ್ರಮ ಗ್ಯಾಸ್‌ರೀಫಿಲಿಂಗ್: ಓರ್ವ ವ್ಯಕ್ತಿ ವಶ

» **ಚಳ್ಳಕೆರೆ**

ನಗರದ ಪಾವಗಡ ರಸ್ತೆಯ ರಾಘವೇಂದ್ರಸ್ವಾಮಿ ಕಲ್ಯಾಣ ಮಂಟಪದ ಸಾರ್ವಜನಿಕರ ರಸ್ತೆಯಲ್ಲಿ ಅಕ್ರಮವಾಗಿ ಕಾರು ಮತ್ತು ಆಟೋರಿಕ್ಷಾಗಳಿಗೆ ಗ್ಯಾಸ್ ರೀಫಿಲಿಂಗ್ ಮಾಡುತ್ತಿದ್ದ ಗಾಂಧಿನಗರದ ಸಿ.ಐ.ಶಾಯಿದ್‌ಆಫ್ರೀದ್(23) ಎಂಬ ಯುವಕನನ್ನು ಪೊಲೀಸರು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ. ತಾಲ್ಲೂಕು ಕಚೇರಿಯ ಆಹಾರ ಶಿರಸ್ಥೇದಾರ್ ಪಿ.ವೀರಣ್ಣ ಈ ಬಗ್ಗೆ ದೂರು ನೀಡಿದ್ದು, ಸಾರ್ವಜನಿಕ ಆಸ್ತಿ, ಪಾಸ್ತಿ, ಪ್ರಾಣಕ್ಕೆ ಹಾನಿ ಉಂಟಾಗುವ ಸಾಧ್ಯತೆ ಇದೆ ಎಂದು ತಿಳಿಸಿ ಗೃಹೋಪಯೋಗಿ ಗ್ಯಾಸ್ ರೀಫಿಲಿಂಗ್ ಮಾಡುತ್ತಿರುವುದಾಗಿ ದೂರು ನೀಡಿದ್ದರು. ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಆರೋಪಿ ಶಾಯಿದ್ ಆಫ್ರೀದನನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿರುವುದಾಗಿ ಪಿಎಸ್‌ಐ ಧರೆಪ್ಪಬಾಳಪ್ಪ ದೊಡ್ಡಮನಿ ತಿಳಿಸಿದರು.

### ಪತ್ತೆಗೆ ಮನವಿ

» **ಚಳ್ಳಕೆರೆ**

ತಾಲ್ಲೂಕಿನ ಮೀರಸಾಬಿಹಳ್ಳಿ ಗ್ರಾಮದ ಭದ್ರಣ್ಣ(43) ಎಂಬವ್ಯಕ್ತಿ13ಸೆಪ್ಟಂಬರ್2021ರಲ್ಲಿಕಾಣೆಯಾಗಿದ್ದು ಇದುವರೆಗೂ ಪತ್ತೆಯಾಗಿರುವುದಿಲ್ಲ. ಕೂಡಲೇ ಗಂಡನನ್ನು ಹುಡುಕಿಕೊಡಬೇಕೆಂದು ಪತ್ನಿ ಶಾಂತಮ್ಮ ಪೊಲೀಸ ಠಾಣೆಗೆ ಮನವಿ ಮಾಡಿದ್ದಾಳೆ. ಚಳ್ಳಕೆರೆ-29 ನಗರದ ಚಿತ್ರಯ್ಯನಹಟ್ಟಿಯ ನಿವಾಸಿ ಸುಷ್ಮಾ(23) ಕೋಂ ಚಿನ್ನಯ್ಯ ಇವರು 22 ಅಕ್ಟೋಬರ್ 2022ರಿಂದ ಕಾಣೆಯಾಗಿದ್ದು ಎಲ್ಲೂ ಹುಡುಕಿದರೂ ಸಿಕ್ಕಿರುವುದಿಲ್ಲ. ಈ ಬಗ್ಗೆ ದೂರು ನೀಡಲಾಗಿದ್ದು, ಸಿಗದ ಹಿನ್ನೆಲೆಯಲ್ಲಿ ಮತ್ತೊಮ್ಮೆ ಸುಷ್ಮಾರವರ ಸಹೋದರ ಪತ್ತೆ ಮಾಡಿಕೊಡುವಂತೆ ಪೊಲೀಸ ಠಾಣೆಗೆ ಮನವಿ ಮಾಡಿದ್ದಾರೆ.

### ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರಿಂದ ವಿವಿಧ ಮತಗಟ್ಟೆಗಳಿಗೆ ಭೇಟಿ

# ಮತದಾರರ ಪಟ್ಟಿ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ಸೂಪರ್ ಚೆಕ್

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಜರುಗುತ್ತಿರುವ ಮತದಾರರ ಪಟ್ಟಿ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ಬಗ್ಗೆ ಚುನಾವಣಾ ಆಯೋಗದ ಸೂಚನೆಯಂತೆ ಸೂಪರ್ ಚೆಕ್ ನಡೆಸುವ ಕಾರ್ಯಕ್ರಮದಡಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಶುಕ್ರವಾರ ನಗರದ ವಿವಿಧ ಮತಗಟ್ಟೆಗಳಿಗೆ ಹಾಗೂ ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಚುನಾವಣಾ ಆಯೋಗದ ನಿರ್ದೇಶನದನ್ವಯ ಜಿಲ್ಲಾಧಿಕಾರಿಗಳು ವಿವಿಧ ಮತಗಟ್ಟೆಗಳಿಗೆ ಹಾಗೂ ಮತಗಟ್ಟೆಗಳ ವ್ಯಾಪ್ತಿಯ ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ಕಾರ್ಯ ಕೈಗೊಂಡರು. ಇದರ ಅಂಗವಾಗಿ, ನಗರದ ಚೇಳುಗುಡ್ಡ,ಬುರುಜನಹಟ್ಟಿ,ರಂಗಯ್ಯನಬಾಗಿಲು ಸೇರಿದಂತೆ ವಿವಿಧ ಪ್ರದೇಶಗಳ ಮತಗಟ್ಟೆಗಳಿಗೆ ಹಾಗೂ ಈ ವ್ಯಾಪ್ತಿಯ ಮನೆಗಳಿಗೆ ಖುದ್ದು ಭೇಟಿ ನೀಡಿದ ಅವರು, ಮತದಾರರ ಪಟ್ಟಿಗೆ



ಹೊಸದಾಗಿ ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ಸ್ಥಳಾಂತರ, ನಿಷ್ಕ್ರಮಣೆ (ಡಿಲೀಟ್) ಕುರಿತು ಮತಗಟ್ಟೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಮತದಾರ ಪಟ್ಟಿಯಲ್ಲಿನ ಹೆಸರು ಸೇರ್ಪಡೆ ಹಾಗೂ ಬದಲಾವಣೆಗಾಗಿ ಅರ್ಜಿ ಸಲ್ಲಿಸಿದ ಫಾರಂ-6 ಹಾಗೂ 7 ಅರ್ಜಿಗಳ ಮೇಲ್ವಿಚಾರಣೆ ನಡೆಸಿದರು.

ಈ ಸಂದರ್ಭದಲ್ಲಿ ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ, ಸೇರಿದಂತೆ ವಿವಿಧ ಸಿಬ್ಬಂದಿ ಇದ್ದರು.

## ನ್ಯಾಯಾಧೀಶರಿಂದ 4 ಜನ ನಿರ್ಗತಿಕರ ರಕ್ಷಣೆ ಮತ್ತು ಪುನರ್ವಸತಿ

» **ದಾವಣಗೆರೆ**

ಇಡಿಸೆಂಬರ್ 29 ರಂದು ಮಧ್ಯಾಹ್ನದ ವೇಳೆಯಲ್ಲಿ ದಾವಣಗೆರೆ ಬಸ್ಸು ನಿಲ್ದಾಣ, ಪಿ.ಜಿ ಬಡಾವಣೆ ಮತ್ತು ವಿದ್ಯಾರ್ಥಿ ಭವನದ ಬಳಿ ಇದ್ದ ನಿರ್ಗತಿಕರು ಮತ್ತು ಭಿಕ್ಷಾಟನೆ ಮಾಡುತ್ತಿದ್ದ ಇಬ್ಬರು ಪುರುಷರು ಮತ್ತು ಇಬ್ಬರು ಮಹಿಳೆಯರನ್ನು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾಯರ್ದಶಿರ್ಯವರಾದ ಮಹವೀರ ಮ. ಕರೆಣ್ಣವರ ಮತ್ತು ಕಾನೂನು ಕಾಲೇಜು ವಿದ್ಯಾರ್ಥಿಗಳು, ಸಮಾಜ ಕಲ್ಯಾಣ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ರಕ್ಷಣೆ ಮಾಡಿ ಅವರ ಕುಂದುಕೊರತೆಗಳನ್ನು ವಿಚಾರಿಸಿ ಅವರಿಗೆ ಸೂಕ್ತ ಸೌಲಭ್ಯ ಒದಗಿಸುವ ಸಲುವಾಗಿ ಅವರನ್ನು ಪುನರ್ವಸತಿ ಕೇಂದ್ರಕ್ಕೆ ಕಳುಹಿಸಿ ಮಾನವಿಯತೆಯನ್ನು ಎತ್ತಿ ಹಿಡಿದಿದ್ದಾರೆ..

ಡಿಸೆಂಬರ್ 28 ರಂದು ಕಾನೂನು ಕಾಲೇಜಿನ ವಿದ್ಯಾರ್ಥಿಗಳು ನಗರದಲ್ಲಿ ಬಹಳಷ್ಟು ಜನ ನಿರ್ಗತಿಕರು ಮತ್ತು ಭಿಕ್ಷಾಟನೆಯಲ್ಲಿ ತೊಡಗಿರುವ ವ್ಯಕ್ತಿಗಳು ಇದ್ದಾರೆ ಎಂದು ಮತ್ತು ಅವರುಗಳಿಗೆ ಸಾಮಾಜಿಕ ಭದ್ರತೆಯ ಅವಶ್ಯಕತೆ ಇದೆ ಎಂದು ನ್ಯಾಯಾಧೀಶರಿಗೆ ತಿಳಿಸಿದ್ದರು. ಇದರ ಬಗ್ಗೆ ಕಾರ್ಯಪ್ರವೃತ್ತರಾಗಿ ನಿರ್ಗತಿಕರನ್ನು ರಕ್ಷಣೆ ಮಾಡಿ ಪುನರ್ವಸತಿ ಕಲ್ಪಿಸಲು ಮುಂದಾಗಿ ರಕ್ಷಣೆ ಮಾಡಿ ಪುನರ್ವಸತಿ ಕಲ್ಪಿಸಲಾಗಿದೆ.

## ಕುವೆಂಪುರವರು ಕನ್ನಡ ಸಾಹಿತ್ಯ ಲೋಕಕ್ಕೆ ನೀಡಿದ ಕೊಡುಗೆ ಅಮೂಲ್ಯ, ಅಪಾರ: ರಘುಮೂರ್ತಿ



» **ಚಳ್ಳಕೆರೆ**

ನಾಡಿನ ಕನ್ನಡ ಸಾಹಿತ್ಯ ಲೋಕಕ್ಕೆ ಹಲವಾರು ಮಹಾನೀಯರು ತಮ್ಮದೇಯಾದ ವಿಶೇಷ ಸಾಧನೆಯನ್ನು ದಾಖಲಿಸುವ ಮೂಲಕ ಕನ್ನಡ ಭಾಷೆಯ ಶ್ರೀಮಂತಿಕೆಯನ್ನು ಹೆಚ್ಚಿಸಿದ್ದಾರೆ. ಇಂದು ನಮ್ಮ ಜೀವ ಭಾಷೆಯಾದ ಕನ್ನಡ ವಿಶೇಷ ಮೌಲ್ಯಪಡೆದಿದೆಯಾದರೆ ಅದರಲ್ಲಿ ರಾಷ್ಟ್ರಕವಿ ಕುವೆಂಪುರವರ ಕೊಡುಗೆ ಅಪಾರವೆಂದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶುರವಾರ ನಗರದ ತಾಲ್ಲೂಕು ಕಚೇರಿ ಆವರಣದಲ್ಲಿ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಮ್ಮಿಕೊಂಡಿದ್ದ ಕುವೆಂಪುರವರ 119ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ನೂರಾರು ವರ್ಷಗಳ ಹಿಂದೆಯೇ ಕನ್ನಡ ಸಾಹಿತ್ಯದ ಸರ್ವತೋಮುಖ ಬೆಳವಣಿಗೆಗೆ ಬೇಕಾದ ಎಲ್ಲಾ ದೃಷ್ಠಿಕೋನವನ್ನು ಕುವೆಂಪು ಹೊಂದಿದ್ದರು. ಇಂತಹ ಮಹಾನ್ ಸಾಧಕನ ಜನ್ಮದಿನಾಚರಣೆ ಆಚರಿಸಲು ಸಂತಸವೆನ್ನಿಸುತ್ತದೆ. ಕುವೆಂಪುರವರ ಸಾಹಿತ್ಯದಲ್ಲಿ ಅಮೂಲ್ಯ ಶಕ್ತಿ ಅಡಗಿದೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ರಾಷ್ಟ್ರೀಯ ಹಬ್ಬಹಳ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ದಾರ್ ರೇಹಾನ್ ಪಾಷ, ಶಿವಮೊಗ್ಗ ಜಿಲ್ಲೆಯ ಕುಪ್ಪಳ್ಳಿ ಕುವೆಂಪುರವರ ಹುಟ್ಟೂರು. ಅವರ ನಿಜವಾದ ಹೆಸರು ಕುಪ್ಪಳ್ಳಿ ವೆಂಕಟಪ್ಪ ಪುಟ್ಟಪ್ಪ. ಕರ್ನಾಟಕದ ಹಸಿರಿನ ಸಿರಿ ಮಲೆನಾಡ ಸ್ವರ್ಗವೆಂದು ಖ್ಯಾತಿಯಾದ ಶಿವಮೊಗ್ಗ ಜಿಲ್ಲೆಯಲ್ಲಿ ಜನಿಸಿದವರು ಅವರು ಪ್ರಕೃತಿಕ ಆರಾಧರಾಗಿದ್ದರು. ಅವರ ಲೇಖನ, ಕಾವ್ಯ, ರಚನೆಗಳಿಗೆ ಅಲ್ಲಿನ ನೈಸರ್ಗಿಕ ಸಂಪತ್ತೇ ಪ್ರೇರಣೆ ಎಂದರು. ಕಾರ್ಯಕ್ರಮದಲ್ಲಿ ಡಿವೈಎಸ್ಪಿ ರಾಜಣ್ಣ, ನಗರಸಭಾ ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ.ರಾಘವೇಂದ್ರ, ಸದಸ್ಯ ಕೆ.ವೀರಭದ್ರಪ್ಪ, ಬಿ.ಟಿ.ರಮೇಶ್‌ಗೌಡ, ಕಾಂಗ್ರೆಸ್ ಮುಖಂಡರಾದ ಸಿ.ಟಿ.ಶ್ರೀನಿವಾಸ್, ಬಿ.ವಿ.ಸಿರಿಯಣ್ಣ, ಬೊಪ್ಪಣ್ಣ, ಮಾಜಿ ತಾಲ್ಲೂಕು ಪಂಚಾಯಿತಿ ಸದಸ್ಯ ಟಿ.ಗಿರಿಯಪ್ಪ, ಡಿ.ಹನುಮಂತಪ್ಪ, ಆರ್.ಪ್ರಸನ್ನಕುಮಾರ್ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ಆಯೋಧ್ಯಯ ಶ್ರೀರಾಮಮಂದಿರ ಲೋಕಾರ್ಪಣೆ

# ಚಳ್ಳಕೆರೆಯಲ್ಲಿ ಫಲಮಂತ್ರಾಕ್ಷತೆಯ ಭವ್ಯವಾದ ಮೆರವಣಿಗೆ

» **ಚಳ್ಳಕೆರೆ**

ಮರ್ಯಾದ ಪುರುಷೋತ್ತಮ ಪ್ರಭು ಶ್ರೀರಾಮಚಂದ್ರನ ಭವ್ಯವಾದ ರಾಮಮಂದಿರ ಜ.22ರಂದು ಉದ್ಘಾಟನೆಯಾಗಿದ್ದು, ಸಾರ್ವಜನಿಕರಿಗೆ ದೇವಸ್ಥಾನದ ಉದ್ಘಾಟನೆಗೆ ಆಮಂತ್ರಿಸಲು ಫಲಮಂತ್ರಾಕ್ಷತೆ ಆಗಮಿಸಿದ್ದು, ಇಲ್ಲಿನ ಗಾಯಿತ್ರಿ ಮಹಿಳಾ ಸಾಂಸ್ಕೃತಿಕ ಸಂಘದಲ್ಲಿ ಪೂಜೆ ನೆರವೇರಿಸಿ ಭ್ಯವವಾದ ಮೆರವಣಿಗೆ ಮೂಲಕ ರಾಮಮಂದಿರಕ್ಕೆ ಸಾಗಿಸಿ ಅಲ್ಲಿಂದ ಗ್ರಾಮೀಣ ಭಾಗಗಳಿಗೆ ಫಲಮಂತ್ರಾಕ್ಷತೆಯನ್ನು ಕಳಿಸುವ ವ್ಯವಸ್ಥೆಯನ್ನು ವಿಶ್ವಹಿಂದೂಪರಿಷತ್ ಘಟಕ ಹಮ್ಮಿಕೊಂಡಿತ್ತು.

ತಾಲ್ಲೂಕು ವಿಶ್ವಹಿಂದೂಪರಿಷತ್ ಅಧ್ಯಕ್ಷ ಡಾ.ಡಿ.ಎನ್.ಮಂಜುನಾಥ ಮಾತನಾಡಿ, ಇಂದು ಭಾರತಿಯರ ಪಾಲಿಗೆ ಪವಿತ್ರವಾದ ಪುಣ್ಯದಿನವಾಗಿದೆ. ಶ್ರೀರಾಮ ಜನಿಸಿದ ನಾಡಿನಲ್ಲಿ ರಾಮಮಂದಿರ ನಿರ್ಮಾಣದ ನೂರಾರು ವರ್ಷಗಳ ಕನಸು ನನಸಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸರ್ವಭಕ್ತರು ಕಾರ್ಯಕ್ರಮಕ್ಕೆ



ಆಗಮಿಸುವ ಉದ್ದೇಶದಿಂದ ಅಲ್ಲಿಂದಲೇ ಫಲಮಂತ್ರಾಕ್ಷತೆಯನ್ನು ಕಳಿಸಿಕೊಟ್ಟಿದ್ದು ಪೂಜೆಯ ನಂತರ ಅವುಗಳನ್ನು ಗ್ರಾಮೀಣ ಭಾಗಕ್ಕೂ ಜ.1ರಿಂದ ವಿತರಣೆ ಮಾಡಲಾಗುವುದು ಎಂದರು.

ಅಯೋಧ್ಯಯ ಶ್ರೀರಾಮಮಂದಿರ ಉದ್ಘಾಟನೆ ಹಿನ್ನೆಲೆಯಲ್ಲಿ ಆಗಮಿಸಿದ ಫಲಮಂತ್ರಾಕ್ಷತೆಯ ಪೂಜಾ ಕಾರ್ಯವನ್ನು ನೆರವೇರಿಸಿದ ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಡಾ.ಅನಂತರಾಮ್‌ಗೌತಮ್ ಮಾತನಾಡಿ, ಸುಸಂಸ್ಕೃತ ಭಾರತದ ನಾಡಿನಲ್ಲಿ ಮರ್ಯಾದ ಪುರುಷೋತ್ತಮ ಪ್ರಭು ಶ್ರೀರಾಮಚಂದ್ರನ ಜನ್ಮಸ್ಥಾನದಲ್ಲೇ ಮಂದಿರದ ನಿರ್ಮಾಣ ಮಾಡುವ ಕನಸು ನನಸಾಗುತ್ತಿದ್ದು, ಇದು ದೇಶದ 130 ಕೋಟಿ ಬಂಧುಗಳಿಗೆ ಸಂತಸ ಕ್ಷಣಗಳಾಗಿವೆ. ನಾವೆಲ್ಲರೂ ಪ್ರಭು ಶ್ರೀರಾಮಚಂದ್ರನ ಆರಾಧಕರಾಗಿದ್ದೇವೆ. ಪ್ರಭುಶ್ರೀರಾಮಚಂದ್ರನ ಆದರ್ಶಗಳು ನಮ್ಮೆಲ್ಲರಿಗೂ ದಾರಿದೀಪವಾಗಿವೆ. ಭಾರತ ಸರ್ವಶ್ರೇಷ್ಠವಾದ ಸಂಸ್ಕೃತಿ, ಸಂಸ್ಕಾರ ಹೊಂದಿದ್ದು, ಶ್ರೀರಾಮಜನ್ಮದ ನಾಡು ಇದಾಗಿದ್ದು, ಶ್ರೀರಾಮನ ಆಶೀರ್ವಾದ ಸದಾನಮ್ಮ ಮೇಲೆ ಇರಲಿದೆ. ನಾವೆಲ್ಲರೂ ಭಕ್ತಿಶ್ರದ್ಧೆಯಿಂದ ಈ ಪುಣ್ಯ ಕಾರ್ಯದಲ್ಲಿ ಪಾಲ್ಗೊಳ್ಳುವ ಸಂಕಲ್ಪ ಮಾಡೋಣ. ಜ.22ರಂದು ಉದ್ಘಾಟನೆಯಾಗಲಿರುವ ಶ್ರೀರಾಮನ ದೇವಸ್ಥಾನಕ್ಕೆ ದೇಶ, ವಿದೇಶದ ಗಣ್ಯರು, ಸಾಧುಸಂತರು ಆಗಮಿಸಲಿದ್ದು, ಆ ದಿನ ಭಾರತದ ಇತಿಹಾಸದಲ್ಲಿ ವಿಶೇಷತೆಯನ್ನು ಪಡೆಯಲಿದೆ ಎಂದರು.

ಗಾಯಿತ್ರಿ ಮಹಿಳಾ ಸಾಂಸ್ಕೃತಿಕ ಭವನದಿಂದ ಆರಂಭವಾದ ಮೆರವಣಿಗೆ ಮಲ್ಲಿಕಾರ್ಜುನಸ್ವಾಮಿ ದೇವಸ್ಥಾನ, ವಾಲ್ಮೀಕಿ ವೃತ್ತ, ಅಂಬೇಡ್ಕರ್ ವೃತ್ತ, ನೆಹರೂ ಸರ್ಕಲ್ ಮೂಲಕ ಶ್ರೀರಾಮಮಂದಿರ ತಲುಪಿತು. ಮೆರವಣಿಗೆಯಲ್ಲಿ ನಗರದ ಆರ್ಯವೈಶ್ಯ ಸಮಾಜವೂ ಸೇರಿದಂತೆ ವಿವಿಧ ಸಮಾಜದ ಬಂಧುಗಳು ಹಾಗೂ ಭಜನಾ ತಂಡಗಳು ಪಾಲ್ಗೊಂಡಿದ್ದವು. ಮಂಗಳವಾದ್ಯದೊಡನೆ ಮೆರವಣಿಗೆ ಸಾಗಿತು. ವಿಶ್ವಹಿಂದೂಪರಿಷತ್‌ನ ಕೆ.ಎಂ. ಯತೀಶ್, ಬಾಳೆಮಂಡಿರಾಮದಾಸ್, ಚಿದಾನಂದ, ಟಿ.ಮಂಜುನಾಥ, ಶಿವಪುತ್ರಪ್ಪ, ಮಧು, ಎಂ.ಸತ್ಯನಾರಾಯಣರಾವ್, ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಅವಿಷ್ಕಾರ, ನಾವೀನ್ಯತೆ ಪುರಸ್ಕಾರಕ್ಕೆ ಅರ್ಜಿ

» ಚಿತ್ರದುರ್ಗ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು 2023–24ನೇ ಸಾಲಿನಲ್ಲಿ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಪ್ರೊ.ಯು.ಆರ್. ರಾವ್ ಪುರಸ್ಕಾರ, ಪದವಿ ವಿದ್ಯಾರ್ಥಿಗಳಿಗೆ ಪ್ರೊ.ಎಸ್.ಕೆ.ಶಿವಕುಮಾರ್ ಪುರಸ್ಕಾರ ಮತ್ತು ಜನಸಾಮಾನ್ಯರು ಮತ್ತು ಬೋಧಕರಿಗೆ ಕೆ.ಎಸ್.ಟಿ.ಎ ಪುರಸ್ಕಾರಕ್ಕಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. 2024ರ ಜನವರಿ 20 ಅರ್ಜಿ ಸಲ್ಲಿಸಲು ಕೊನೆಯ ದಿನ. ಅರ್ಹತೆ, ಅರ್ಜಿ ಸಲ್ಲಿಸುವ ವಿಧಾನ ಮತ್ತು ಇತರೆ ವಿವರಗಳನ್ನು ಅಕಾಡೆಮಿಯ ವೆಬ್‌ಸೈಟ್ www. kstacademy.in .ನಲ್ಲಿ ಪಡೆಯಬಹುದಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

### ಪುಸ್ತಕಗಳ ಆಯ್ಕೆಗಾಗಿ ಅರ್ಜಿ ಆಹ್ವಾನ

» ಚಿತ್ರದುರ್ಗ

ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಗ್ರಂಥಾಲಯಗಳಿಗೆ ಏಕಗವಾಕ್ಷಿ ಯೋಜನೆಯಡಿ ಪುಸ್ತಕ ಖರೀದಿ ಆಯ್ಕೆಗಾಗಿ 2023ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಪುಸ್ತಕಗಳನ್ನು ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿಯ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. 2024ರ ಫೆಬ್ರವರಿ 5 ಅರ್ಜಿ ಸಲ್ಲಿಸಲು ಕೊನೆಯ ದಿನ.

2023ರಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಸಾಹಿತ್ಯ, ಕಲೆ, ವಿಜ್ಞಾನ, ವೃತ್ತಿಶಿಕ್ಷಣ, ಕೌಶಲ್ಯಾಭಿವೃದ್ಧಿ, ಆದಾಯ ಉತ್ಪಾದನಾ ಯೋಜನೆ, ಸ್ಪರ್ಧಾತ್ಮಕ, ಪಠ್ಯ ಪುಸ್ತಕ, ಸಾಂದರ್ಭಿಕ ಮತ್ತು ಪರಾಮರ್ಶನ ಕೃತಿಗಳು ಹಾಗೂ ಮಕ್ಕಳ ಸಾಹಿತ್ಯ, ನವಸಾಕ್ಷರರ ಕೃತಿಗಳು ಇತ್ಯಾದಿ ವಿಷಯಗಳ ಕನ್ನಡ, ಆಂಗ್ಲ ಮತ್ತು ಇತರೆ ಭಾರತೀಯ ಭಾಷೆಯ ಗ್ರಂಥಗಳ ಆಯ್ಕೆಗೆ ಲೇಖಕರು, ಲೇಖಕ–ಪ್ರಕಾಶಕರು, ಪ್ರಕಾಶಕರು ಮತ್ತು ಪ್ರಕಟಣಾ ಸಂಸ್ಥೆಗಳಿಂದ ಪುಸ್ತಕಗಳನ್ನು ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಆಯ್ಕೆಗಾಗಿ ಸ್ವೀಕರಿಸಲು ಅರ್ಜಿಗಳನ್ನು ಆಹ್ವಾನಿಸಿದೆ.

ಪುಸ್ತಕಗಳು 2023ರಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾಗಿರಬೇಕು. ಮರುಮುದ್ರಣವಾದಲ್ಲಿ ಹತ್ತು ವರ್ಷಗಳ ಅಂತರವಿರಬೇಕು. ಈ ಬಗ್ಗೆ ದೃಢೀಕರಣ ಪತ್ರವನ್ನು ನೀಡಬೇಕು. ಪುಸ್ತಕದ ಶೀರ್ಷಿಕೆ, ಗ್ರಂಥಕರ್ತರ ಹೆಸರು, ಪ್ರಕಾಶಕರ ಹೆಸರು, ಪುಟಸಂಖ್ಯೆ, ಪ್ರಕಟಣೆಯ ವರ್ಷ, ಆವೃತ್ತಿಯ ಎಲ್ಲಾ ವರ್ಷಗಳ ವಿವರ, ಮುಖ ಬೆಲೆಗಳನ್ನು ಸ್ಪಷ್ಟವಾಗಿ ನಮೂದಿಸಬೇಕು. ಇವುಗಳಲ್ಲಿ ತಾಂತ್ರಿಕ ಲೋಪದೋಷಗಳು ಏನಾದರೂ ಇದ್ದಲ್ಲಿ ತಿರಸ್ಕರಿಸುವ ಹಕ್ಕು ಆಯ್ಕೆ ಸಮಿತಿಗೆ ಇದೆ. ಕೃತಿಯ ಮೊದಲ ಮುದ್ರಣಕ್ಕೂ ಮತ್ತು ಮರು ಮುದ್ರಣಕ್ಕೂ ಹತ್ತು ವರ್ಷಗಳ ಅಂತರವಿದೆ ಎಂಬ ಬಗ್ಗೆ ಕಡ್ಡಾಯವಾಗಿ ಮುಚ್ಚಳಿಕೆ ಪತ್ರವನ್ನು ನೀಡತಕ್ಕದ್ದು. ಸುಳ್ಳು ಮಾಹಿತಿ ನೀಡಿದಲ್ಲಿ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು. ನಿಗದಿತ ಅರ್ಜಿ ನಮೂನೆಯು ಇಲಾಖೆಯ ಅಂತರ್ಜಾಲದಲ್ಲಿ www.dpl.karnataka.gov.in ಹಾಗೂ ರಾಜ್ಯದ ಎಲ್ಲಾ ಜಿಲ್ಲಾ, ನಗರ ಕೇಂದ್ರ ಗ್ರಂಥಾಲಯಗಳಲ್ಲಿ ದೊರೆಯುತ್ತವೆ. ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಪುಸ್ತಕಗಳನ್ನು ಗ್ರಂಥಸ್ವಾಮ್ಯ ವಿಭಾಗ, ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ 2024ರ ಜನವರಿ 31ರ ಒಳಗಾಗಿ ಕಾಪಿರೈಟ್ ಮಾಡಿಸಿರುವ ಪುಸ್ತಕಗಳನ್ನು ಆಯ್ಕೆಗಾಗಿ ಅರ್ಜಿಯೊಂದಿಗೆ ಪುಸ್ತಕದ ಒಂದು ಪ್ರತಿಯನ್ನು ನೋಂದಣಿ ಪತ್ರದ ಪ್ರತಿಯೊಂದಿಗೆ ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ.ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು–560001 ಇಲ್ಲಿಗೆ 2024ರ ಫೆಬ್ರವರಿ 5ರ ಸಂಜೆ 5 ಗಂಟೆ ಒಳಗಾಗಿ ಸ್ಲಲಿಸುವುದು. ತದನಂತರ ಯಾವುದೇ ಪುಸ್ತಕಗಳನ್ನು ಆಯ್ಕೆಗೆ ಸ್ವೀಕರಿಸುವುದಿಲ್ಲ. ಅರ್ಜಿಯೊಂದಿಗೆ ಪುಸ್ತಕದ ಒಂದು ಪ್ರತಿ, ಕಾಪಿರೈಟ್‌ನ ನೋಂದಣಿಯ ದೃಢೀಕರಿಸಿದ ನಕಲು ಪ್ರತಿ, ವಿತರಕರು ಸರಬರಾಜು ಹಕ್ಕನ್ನು ಪಡೆದಿದ್ದಲ್ಲಿ ಅದರ ನಕಲು ಪ್ರತಿಯನ್ನು ಅರ್ಜಿಯ ಜೊತೆ ಕಡ್ಡಾಯವಾಗಿ ಸಲ್ಲಿಸಬೇಕು ಎಂದು ಮುಖ್ಯ ಗ್ರಂಥಾಲಯಾಧಿಕಾರಿ ಕೊಳ್ಳಿ ಬಸವರಾಜ್ ತಿಳಿಸಿದ್ದಾರೆ.

### ಗೋಶಾಲೆಗೆ ಮೇವು ಪೂರೈಕೆ ಮಾಡಲು ರೈತರಿಗೆ ಮನವಿ

» ದಾವಣಗೆರೆ

ಜಿಲ್ಲೆಯಲ್ಲಿ ಬರಪರಿಸ್ಥಿತಿ ತಲೆದೋರಿದ್ದು, ಜಿಲ್ಲೆಯ ದಾವಣಗೆರೆ ತಾಲ್ಲೂಕಿನ ಹೊಸಳ್ಳಿ ಗ್ರಾಮದಲ್ಲಿರುವ ಸರ್ಕಾರಿ ಗೋಶಾಲೆಗೆ ಮೇವಿನ ಅವಶ್ಯಕತೆ ಇರುವುದರಿಂದ ಮೇವು ಪೂರೈಕೆದಾರರಿಂದ ಮೇವು ದರಪಟ್ಟಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಜಿಲ್ಲೆಯಲ್ಲಿ ಅಧಿಕ ಮೇವಿನ ದಾಸ್ತಾನಿರುವ ರೈತರು ಅಥವಾ ಮೇವು ಪೂರೈಕೆದಾರರು ಬೇಲು ಮಾಡಿದ ಸ್ಥಿತಿಯಲ್ಲಿ ಒಣಗಿದ ಭತ್ತದ ಹುಲ್ಲು, ಒಣಗಿದ ಮೆಕ್ಕೆ ಜೋಳದ ಸೊಪ್ಪೆ, ಬಿಳಿ ಜೋಳದ ಸೊಪ್ಪೆ ಮತ್ತು ಒಣಗಿದ ರಾಗಿ ಹುಲ್ಲಿಗೆ ಪ್ರತಿ ಮೆಟ್ರಿಕ್ ಟನ್ ಮೇವಿನ ದರವನ್ನು ನಮೂದಿಸಿ ಜನವರಿ 10 ರಂದು ಸಂಜೆ 5 ಗಂಟೆಯೊಳಗಾಗಿ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಮೇವಿನ ಗುಣಮಟ್ಟವನ್ನು ಪರಿಶೀಲಿಸಿ ಗೋಶಾಲೆಗೆ ಅವಶ್ಯಕವಿರುವಷ್ಟು ಮೇವನ್ನು ನಿಯಮಾನುಸಾರ ಖರೀದಿಸಲಾಗುತ್ತದೆ

---

ವಿಶ್ವಮಾನವ ದಿನಾಚರಣೆಯಲ್ಲಿ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಕರೆ

# ವೈಜ್ಞಾನಿಕ ಮನೋಭಾವ, ವೈಚಾರಿಕತೆ ರೂಢಿಸಿಕೊಳ್ಳಿ

» ಚಿತ್ರದುರ್ಗ

ವಿದ್ಯಾರ್ಥಿಗಳು ವೈಜ್ಞಾನಿಕ ಮನೋಭಾವ ಹಾಗೂ ವೈಚಾರಿಕತೆ ರೂಢಿಸಿಕೊಳ್ಳುವಂತೆ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಕರೆ ನೀಡಿದರು.

ನಗರದ ತರಾಸು ರಂಗಮಂದಿರದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನದ ಅಂಗವಾಗಿ ವಿಶ್ವಮಾನವ ದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.



ಕುವೆಂಪು ಅವರು ರಾಜ್ಯಕ್ಕೆ ಮೊದಲ ಜ್ಞಾನಪೀಠ ಪ್ರಶಸ್ತಿ ದೊರಕಿಸಿಕೊಟ್ಟರು. ರಾಜ್ಯ ಸರ್ಕಾರ ಕುವೆಂಪು ಅವರ ಜನ್ಮದಿನವನ್ನು ವಿಶ್ವಮಾನವ ದಿನಾಚರಣೆಯನ್ನಾಗಿ ಘೋಷಿಸುವ ಮೂಲಕ ವೈಜ್ಞಾನಿಕ ಮನೋಭಾವ ಹಾಗೂ ವೈಚಾರಿಕತೆ ಬೆಳೆಸುವ ಉದ್ದೇಶ ಹೊಂದಿದೆ. ನಾವೆಲ್ಲರೂ ಗುಡಿ, ಚರ್ಚ್, ಮಸೀದಿಗಳೆಂಬ ಭೇದ ಭಾವದಿಂದ ಹೊರ ಬಂದು ವಿಶ್ವ ಮಾನವರಾಗಬೇಕು. ಎಲ್ಲಾ ಧರ್ಮಗಳ ಉತ್ತಮ ಸಾರಾಂಶಗಳನ್ನು ಅಳವಡಿಸಿಕೊಳ್ಳಬೇಕು. ಶಾಲಾ ಮಕ್ಕಳು ಎಲ್ಲಾ ಮೂಢನಂಬಿಕೆಗಳನ್ನು ತೊರೆದು ಪ್ರಗತಿಗಾಗಿ ದೃಢನಿಶ್ಚಯ ಮಾಡಬೇಕು ಎಂದರು.

ಕನ್ನಡ ಉಪನ್ಯಾಸಕ ಡಾ.ಬಿ.ಎಂ. ಗುರುನಾಥ್ ಮಾತನಾಡಿ, "ಕೀರ್ತಿ ಶನಿ ತೊಲಗಾಚೆ ದೂರ" ಎಂದು ಹೇಳಿದ ಕುವೆಂಪು ಅವರಿಗೆ ಹಲವಾರು ಕೀರ್ತಿ ಹಾಗೂ ಪುರಸ್ಕಾರಗಳು ಹರಸಿ ಬಂದವು. ಕೀರ್ತಿ ಎಂಬುದು ಮನುಷ್ಯನನ್ನು ಅಹಂಕಾರಿಯನ್ನಾಗಿಸುತ್ತದೆ ಎಂದು ಕುವೆಂಪು ಭಾವಿಸಿದ್ದರು. ಶಿವಮೊಗ್ಗ ಜಿಲ್ಲೆ ಕನ್ನಡ ಸಾರಸ್ವತ ಲೋಕ ಹಾಗೂ ಇಡೀ ಮನುಕುಲಕ್ಕೆ ಕುವೆಂಪು ಅವರಂತಹ ಮೇರು ವ್ಯಕ್ತಿತ್ವ ನೀಡಿದ ಗರಿಮೆ ಹೊಂದಿದೆ. ಇದೇ ರೀತಿ ಚಿತ್ರದುರ್ಗ ಜಿಲ್ಲೆಯ ತಳುಕಿನ ಟಿ.ಎಸ್.ವೆಂಕಣ್ಣಯ್ಯ ಅವರು ಕುವೆಂಪು ಅವರ ಗುರುಗಳಾಗಿ ಅವರ ಸಾಹಿತ್ಯ ಕೃಷಿಗೆ ದಾರಿ ದೀಪವಾದರು. ಇದು ಈ ಜಿಲ್ಲೆಯ ಗರಿಮೆಯಾಗಿದೆ ಎಂದರು.

ಕುವೆಂಪು ತಮ್ಮ ಮಹಾನ್ ಕಾವ್ಯ ಶ್ರೀರಾಮಯಣದರ್ಶನಂ ಅನ್ನು ಭಕ್ತಿ ಹಾಗೂ ಗೌರವ ಪೂರಕವಾಗಿ ಗುರುಗಳಾದ ಟಿ.ಎಸ್.ವೆಂಕಣ್ಣಯ್ಯನವರಿಗೆ ಅರ್ಪಿಸಿರುವುದು ಚಿತ್ರದುರ್ಗ ಜಿಲ್ಲೆಗೆ ಜನರಿಗೆ ಹೆಮ್ಮೆ ಅನಿಸುತ್ತದೆ. 'ಪಾಪಿಗುದ್ಧಾರವಿಹುದು ಸೃಷ್ಠಿಯ ಮಹದ್ ವ್ಯೂಹ ರಚನೆಯಲಿ' ಎಂದು ಹೇಳುವ ಮೂಲಕ ಕುವೆಂಪು ಮೂಲ ರಾಮಾಯಣದ ಪ್ರತಿಯೊಂದು ಪಾತ್ರಗಳನ್ನು ಶ್ರೀರಾಮಯಣದರ್ಶನಂ ಕೃತಿಯಲ್ಲಿ ಉತ್ತಮವಾಗಿ ಚಿತ್ರಿಸಿದ್ದಾರೆ. 'ಮಮತೆಯ ಸುಳಿ ಮಂಥರೆ' ರಾಮ ತಾಯಿ ಕೌಸಲ್ಯ, ಲಕ್ಷಣ ಪತ್ನಿ ಊರ್ಮಿಳೆ ಹೀಗೆ ಹಲವಾರು ಸ್ತ್ರೀ ಪಾತ್ರಗಳ ಮೂಲಕ, ಸಮಸ್ತ ಸ್ತ್ರೀ ಕುಲದ ಅಂತಃಸತ್ವವನ್ನು ಕುವೆಂಪು ತೆರೆದು ಇಟ್ಟಿದ್ದಾರೆ. ಇವರ 'ಕಾನೂರು ಸುಬ್ಬಮ್ಮ ಹೆಗ್ಗಡತಿ ' ಹಾಗೂ 'ಮಲೆಗಳಲ್ಲಿ ಮದುಮಗಳು' ವಿಶ್ವ ಸಾಹಿತ್ಯ ಚರಿತ್ರೆಯಲ್ಲಿ ಶ್ರೇಷ್ಠ ಸ್ಥಾನ ಪಡೆದಿವೆ. 'ಮಲೆಗಳಲ್ಲಿ ಮದುಮಗಳು' ಕಾದಂಬರಿ ಆರಂಭದಲ್ಲಿ ಕುವೆಂಪು ಅವರೇ ಹೇಳಿದಂತೆ 'ಇಲ್ಲಿ ಯಾರೂ ಮುಖ್ಯರಲ್ಲ, ಯಾರೂ ಅಮುಖ್ಯರಲ್ಲ, ಯಾವುದೂ ಯಕಃಶ್ಚಿತವಲ್ಲ! ಕುವೆಂಪು ಅವರ ಕನ್ನಡ ಪ್ರೇಮ ಅಗಾಧವಾದದು. ಕನ್ನಡದ ಹೋರಾಟದಲ್ಲಿ ಅವರ ದಿಟ್ಟ ನಿಲುವು ನಮಗೆಲ್ಲಾ ಮಾದರಿಯಾಗಿದೆ ಎಂದರು.

ಶರಣ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಹಾಗೂ ನಿವೃತ್ತ ಮುಖ್ಯ ಶಿಕ್ಷಕ ಹುರುಳಿ ಎಂ.ಬಸವರಾಜ್ ಉಪನ್ಯಾಸ ನೀಡಿ, ನಾಡಿನಾದ್ಯಂತ 2015ನೇ ಸಾಲಿನಿಂದ ಪ್ರತಿ ವರ್ಷ ಡಿಸೆಂಬರ್ 29ರಂದು ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನದ ಅಂಗವಾಗಿ ವಿಶ್ವ ಮಾನವ ದಿನಾಚರಣೆಯನ್ನು ಆಚರಿಸುತ್ತಾ ಬಂದಿದ್ದೇವೆ. ರಾಷ್ಟ್ರಕವಿ ಕುವೆಂಪು ಅವರು ನೀಡಿದ ಮಾರ್ಗದರ್ಶನ, ಆದರ್ಶಗಳನ್ನು ನಾಡಿನ ಜನತೆಗೆ ತಿಳಿಸಲು, ಅವರು ಕಟ್ಟಿಕೊಟ್ಟಂತಹ ಪ್ರಕೃತಿಯ ಸೊಬಗಿನ ಸೊಗಡನ್ನು ಮಕ್ಕಳೊಂದಿಗೆ ಹಂಚಿಕೊಳ್ಳುವುದು, ಈ ನಾಡಿನ ಸಾಂಸ್ಕೃತಿಕ ಪರಂಪರೆಯನ್ನು ಮತ್ತೆ ಮತ್ತೆ ಮೆಲುಕುಹಾಕುವಂತಹ ಕನ್ನಡ ಕಾವ್ಯ ಪರಂಪರೆಯಲ್ಲಿ ಆಗಿ ಹೋಗಿರಬಹುದಾದ, ಈಗಾಗಲೇ ರಚಿಸಲ್ಪಟ್ಟ ಕಾವ್ಯಗಳಲ್ಲಿರುವಂತಹ ಕಾವ್ಯ ಶ್ರೇಷ್ಠತೆ, ಪರಂಪರೆ, ಆಧ್ಯಾತ್ಮದ ವೈಚಾರಿಕತೆಯ ವಿಚಾರಗಳನ್ನು ಮೆಲುಕು ಹಾಕುವ ಸುಸಂದರ್ಭ ಇದಾಗಿದೆ ಎಂದರು.

ಪ್ರತಿಯೊಂದು ಮಗುವೂ ಹುಟ್ಟುವಾಗ ವಿಶ್ವಮಾನವನಾಗಿ ಹುಟ್ಟಿಬರುತ್ತಾನೆ. ತದನಂತರದಲ್ಲಿ ಜಾತಿ, ಮತ, ಧರ್ಮಗಳ ಎಲ್ಲೆಗಳಲ್ಲಿ ಬಂಧಿಸಲ್ಪಡುತ್ತೇವೆ. ಈ ಬಂಧಿಸಲ್ಪಟ್ಟ ವ್ಯಕ್ತಿಯನ್ನು ವಿಶ್ವಮಾನವನಾಗಿಸುವುದೇ ಶಿಕ್ಷಣದ ಪರಮ ಆದ್ಯತೆಯಾಗಬೇಕು ಎಂದು ಹೊಸ ಪರಿಕಲ್ಪನೆ ಕಟ್ಟಿಕೊಟ್ಟ ರಾಷ್ಟ್ರಕವಿ ಕುವೆಂಪು ಆದರ್ಶ ಪರಂಪರೆಗೆ ನಾಂದಿ ಹಾಡಿದ್ದಾರೆ ಎಂದರು.

ಕುವೆಂಪು ಅವರೇ ಹೇಳುವಂತೆ "ಓ ನನ್ನ ಚೇತನ ಆಗು ನೀ ಅನಿಕೇತನ" ಎಂಬ ಪದ್ಯದ ಸಾಲುಗಳನ್ನು ನೋಡುವುದಾದರೆ ಎಲ್ಲಿಯೂ ಸಹ ನಿಲ್ಲದೇ, ಯಾವುದೇ ಮತಪಂಥಗಳಿಗೆ ಒಳಗಾಗದೇ, ಪ್ರತಿಯೊಂದನ್ನು ಪರೀಕ್ಷಿಸುತ್ತಾ ತನ್ನ ಬದುಕನ್ನು ಕಟ್ಟಿಕೊಳ್ಳಬೇಕು ಎಂಬ ಬಹುದೊಡ್ಡ ಆಸೆ ಕುವೆಂಪು ಅವರದಾಗಿತ್ತು. ಅಂದಿನ ಸಾಮಾಜಿಕ ಚಿತ್ರಣದ ಜತೆಜತೆಯಾಗಿ ಧಾರ್ಮಿಕ ಕಟ್ಟುಪಾಡುಗಳು, ಮೌಢ್ಯ ಅಂಧಕಾರದ ಆಚರಣೆಗಳು, ಜಾತಿಯ ಸಂಕೋಲೆಯಲ್ಲಿ ಮೇಲು–ಕೀಳು ಎಂದು ಮಾನವನನ್ನು ಚಿತ್ರಹಿಂಸೆ ಮಾಡುವ ಸಂದರ್ಭದಲ್ಲಿ ಕುವೆಂಪು ಅವರು ಶಿಕ್ಷಕರಾಗಿ, ಪ್ರಾಧ್ಯಾಪಕರಾಗಿ ಮಾತ್ರವಲ್ಲದೇ ಸಾಂಸ್ಕೃತಿಕ ರಾಯಭಾರಿಯಂತೆ ಇಡೀ ನಾಡನ್ನು ಸುತ್ತುತ್ತಾ ತಮ್ಮ ಕಾವ್ಯ, ಕೃತಿಗಳ ಮೂಲಕ ಬದುಕು ಕಟ್ಟಿಕೊಟ್ಟ ಮಹಾನ್ ಚೇತನ. ಇವರನ್ನು ರಸಋಷಿ, ಕಾಡಿನ ಕವಿ, ಯುಗದ ಕವಿ, ಜಗದ ಕವಿ ಎನ್ನುವ ಅನೇಕ ಬಿರುದುಗಳಿಂದ ವರ್ಣಿಸಲಾಗಿದೆ ಎಂದು ತಿಳಿಸಿದ ಅವರು, ಕನ್ನಡ ಸಾರಸ್ವತ ಲೋಕದಲ್ಲಿ ಸಾಂಸ್ಕೃತಿಕ ರಾಯಭಾರಿಯಂತೆ ಮೆರೆದು, ಕನ್ನಡ ಘನತೆಯನ್ನು ವಿಶ್ವಮಾನ್ಯತೆಗೊಳಿಸಿದವರು ರಾಷ್ಟ್ರಕವಿ ಕುವೆಂಪು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿಶ್ವಮಾನವ ದಿನಾಚರಣೆ ಅಂಗವಾಗಿ ಕುವೆಂಪು ಅವರ ವಿಚಾರಧಾರೆಗಳು ಕುರಿತು ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಪ್ರೌಢಶಾಲೆ, ಪದವಿಪೂರ್ವ ಹಾಗೂ ಪದವಿ ಕಾಲೇಜಿನ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ ಪ್ರಮಾಣ ಪತ್ರ ವಿತರಿಸಲಾಯಿತು. ಚಿತ್ರದುರ್ಗದ ಮೀನಾಕ್ಷಿ ಭಟ್ ಮತ್ತು ತಂಡದವರು ಕುವೆಂಪು ವಿರಚಿತ ಗೀತಗಾಯನ ಪ್ರಸ್ತುತ ಪಡಿಸಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ.ಮಲ್ಲಿಕಾರ್ಜುನ, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಹರೀಶ್, ಪಿಎಂಜಿಎಸ್‌ವೈ ಯೋಜನಾ ವಿಭಾಗದ ಕಾರ್ಯಪಾಲಕ ಅಭಿಯಂತರ ಇ.ಶ್ರೀಧರ್, ನಗರಸಭೆ ವ್ಯವಸ್ಥಾಪಕಿ ಮಂಜುಳಾ, ಕನ್ನಡ ಉಪನ್ಯಾಸಕ ತಿಪ್ಪೇಸ್ವಾಮಿ, ರಂಗನಿರ್ದೇಶಕರು ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಕೆಪಿಎಂ ಗಣೇಶಯ್ಯ ಸೇರಿದಂತೆ ಮತ್ತಿತರರು ಇದ್ದರು.

---

# ಬಿಸಿಯೂಟ ಸೇವನೆ ಅಸ್ವಸ್ಥಗೊಂಡ ಮಕ್ಕಳ ಭೇಟಿ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಬೀರಾವರ ಗ್ರಾಮದಲ್ಲಿ ಈಚೆಗೆ ಬಿಸಿಯೂಟ ಸೇವಿಸಿ ಅಸ್ವಸ್ಥಗೊಂಡ ಎಲ್ಲಾ ಮಕ್ಕಳನ್ನು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹಾಗೂ ಮಕ್ಕಳ ತಜ್ಞ ವೈದ್ಯರ ತಂಡವು ಶುಕ್ರವಾರ ಭೇಟಿ ಮಾಡಿ ಪರೀಕ್ಷೆಗೊಳಪಡಿಸಿದರು.



ಬೀರಾವರ ಗ್ರಾಮದಲ್ಲಿ ಶಾಲಾ ಮಕ್ಕಳು ಬಿಸಿಯೂಟ ಸೇವಿಸಿ ಅಸ್ವಸ್ಥಗೊಂಡ 38 ಮಕ್ಕಳಲ್ಲಿ ಈಗಾಗಲೇ 37 ಮಕ್ಕಳು ಜಿಲ್ಲಾ ಆಸ್ಪತ್ರೆಯಿಂದ ಬಿಡುಗಡೆಗೊಂಡು ಮನೆಗೆ ತೆರಳಿದ್ದಾರೆ. ಒಬ್ಬರು ಮಾತ್ರ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಅಸ್ವಸ್ಥಗೊಂಡ ಮಕ್ಕಳು ಚೇತರಿಸಿಕೊಳ್ಳುತ್ತಿದ್ದಾರೆಎಂದುಡಾ.ಬಿ.ವಿ.ಗಿರೀಶ್ ತಿಳಿಸಿದರು.

ಮಕ್ಕಳ ತಜ್ಞ ಡಾ.ತಿಮ್ಮೇಗೌಡ ಅವರು ಜಿಲ್ಲಾ ಆಸ್ಪತ್ರೆಯಿಂದ ಮನೆಗೆ ತೆರಳಿದ ಎಲ್ಲಾ ಮಕ್ಕಳನ್ನು ಪರೀಕ್ಷೆ ಮಾಡುವುದರ ಮುಖಾಂತರ ಸೂಕ್ತ ಚಿಕಿತ್ಸೆ ನೀಡಿ ಮಾತನಾಡಿದ ಅವರು, ಯಾವುದೇ ಮಕ್ಕಳು ಅಥವಾ ಪೋಷಕರು ಗಾಬರಿ ಅಥವಾ ಆತಂಕಪಡುವ ಅವಶ್ಯಕತೆ ಇಲ್ಲ. ಪಡೆದ ಔಷಧಿಯನ್ನು ಸರಿಯಾಗಿ ಸೇವನೆ ಮಾಡುವುದರ ಮುಖಾಂತರ ಸ್ವಚ್ಛತೆ ಕಡೆಗೆ ಆದ್ಯತೆ ನೀಡಿ, ಸರಿಯಾಗಿ ಔಷಧಿಯನ್ನು ಸೇವಿಸಿ ಎಲ್ಲರೂ ಆರೋಗ್ಯವಾಗಿರಿ, ಯಾವುದೇ ಅಡ್ಡಿ ಆತಂಕ ಬರುವುದಿಲ್ಲ ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ನಮ್ಮ ಆರೋಗ್ಯ ನಮ್ಮ ಕೈಯಲ್ಲಿದೆ. ವಾತಾವರಣಕ್ಕೆ ತಕ್ಕಂತೆ ನಾವುಗಳು ಹೊಂದಿಕೊಂಡು, ದ್ರವರೂಪದ ಆಹಾರ ಸೇವನೆ, ಹೊರಗಿನ ತಿಂಡಿ ತಿನಿಸುಗಳನ್ನು ತಿನ್ನದೇ ಆಗಾಗ್ಗೆ ಕೈ ತೊಳೆಯುವ ಮುಖಾಂತರ ಉತ್ತಮ ಆರೋಗ್ಯ ಹೊಂದಬಹುದು ಎಂದರು.

ಈ ಸಂದರ್ಭದಲ್ಲಿ ಐನಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಶಿವಾನಂದ, ಮಾಜಿ ಅಧ್ಯಕ್ಷ ಚಂದ್ರಶೇಖರಪ್ಪ, ಸದಸ್ಯರಾದ ರೂಪ ಅಜಯ್, ಲಕ್ಷ್ಮಿಸಾಗರ ವಿಜಾಪುರ ಆಡಳಿತ ವೈದ್ಯಾಧಿಕಾರಿ ಡಾ.ಜಯಶ್ರೀ, ಎಸ್‌ಡಿಎಂಸಿ ಅಧ್ಯಕ್ಷ ಸಿದ್ದೇಶ್, ಮುಖ್ಯ ಶಿಕ್ಷಕ ಶಿವಕುಮಾರ್, ಸಹ ಶಿಕ್ಷಕರು, ಗ್ರಾಮಸ್ಥರು, ಅಂಗನವಾಡಿ ಕಾರ್ಯಕರ್ತೆಯರು, ಸಾರ್ವಜನಿಕರು ಇದ್ದರು.

---

### ಸಾಹಿತ್ಯ ಸಂಸ್ಕೃತಿ ಬಿಂಬಿಸುವಂತಹ ನೃತ್ಯಗಳಲ್ಲಿ ಹೆಚ್ಚು ಆಸಕ್ತಿ ತೋರಿಸಿ



**ಹೊಸದುರ್ಗ:** ಆಧುನಿಕ ಹಾಗೂ ತಂತ್ರಗಾರಿಕೆ ಜಗತ್ತಿನಲ್ಲಿ ನಶಿಸಿ ಹೋಗುತ್ತಿರುವ ಸಾಕಷ್ಟು ಕಲೆಗಳನ್ನು ಇಂದಿನ ಯುವ ಪೀಳಿಗೆ ಉಳಿಸಿ ಬೆಳಸಿಕೊಂಡು ಹೋಗುವ ನಿಟ್ಟಿನಲ್ಲಿ ಕೆಲಸ ಮಾಡಬೇಕು ಸಾಹಿತ್ಯ ಮತ್ತು ಸಂಗೀತ ಕೆಲೆಯನ್ನು ಉಳಿಸಿ ಬೆಳಸಬೇಕು ವಿದ್ಯಾರ್ಥಿಗಳಾದ ನೀವುಗಳು ಸಿನಿಮಾ ನೃತ್ಯಗಳ ಹುಚ್ಚುಬಿಟ್ಟು ಸಾಹಿತ್ಯ ಸಂಸ್ಕೃತಿ ಬಿಂಬಿಸುವಂತಹ ನೃತ್ಯಗಳಲ್ಲಿ ಹೆಚ್ಚು ಆಸಕ್ತಿಯನ್ನ ತೋರಿಸಿ ಎಂದು ಸಾಹಿತಿ ನಾಗತಿಹಳ್ಳಿಮಂಜುನಾಥ್ ಕರೆ ನೀಡಿದರು.ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಚಿತ್ರದುರ್ಗ,ಶ್ರೀ ಮಹಾತ್ಮ ಪ್ರಕೃತಿ ಚಿಕಿತ್ಸಾಧಾಮ ಮತ್ತು ವಿಕಲ ಚೇತನರ ಕ್ಷೇಮಾಭಿವೃದ್ಧಿ ಸಂಸ್ಥೆ ಹೊಸದುರ್ಗ ಇವರುಗಳ ಸಂಯುಕ್ತಾಶ್ರಯದಲ್ಲಿ ಪಟ್ಟಣದ ಶ್ರೀ ಗವಿರಂಗನಾಥ ಪ್ರೌಢಶಾಲೆಯ ಆವರಣದಲ್ಲಿ ಆಯೋಜಿಸಲಾಗಿದ್ದ ಜನಪದ ನೃತ್ಯ ಹಾಗೂ ಕನ್ನಡ ಗೀತಗಾಯನ ಕಾರ್ಯಕ್ರಮವನ್ನ ತಬಲ ನುಡಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಭರತನಾಟ್ಯ ಸೇರಿದಂತೆ ಹಲವಾರು ನೃತ್ಯಗಳು ಭಾರತೀಯ ಪರಂಪರೆಯಲ್ಲಿ ವಿಶಿಷ್ಟವಾದ ಸ್ಥಾನವನ್ನ ಪಡೆದುಕೊಂಡಿದೆ ಸಾಹಿತ್ಯ ಮತ್ತು ಸಂಗೀತ ಮಾನವ ಲೋಕದ ಸಂಜೀವಿನಿ ಚಿಕ್ಕ ಮಕ್ಕಳಿಂದ ವಯೋವೃದ್ಧರ ವರೆಗೆ ಎಲ್ಲರ ಮನಸನ್ನು ಅರಳಿಸುವ ಶಕ್ತಿ ಸಂಗೀತ ಹಾಗು ನೃತ್ಯಕ್ಕಿದೆ ಎಂದರು.

---

### ಇ–ಕೆವೈಸಿ ದೃಢೀಕರಣ ಸ್ಪಷ್ಟನೆ

**ದಾವಣಗೆರೆ:** ಅಡಿಗೆ ಅನಿಲ ಸಂಪರ್ಕ ಹೊಂದಿರುವ ಫಲಾನುಭವಿಗಳು ಆಧಾರ್ ಸಂಖ್ಯೆಯ ದಾಖಲೆಯೊಂದಿಗೆ ತಮ್ಮ ಗ್ಯಾಸ್ ಏಜೆನ್ಸಿಗೆ ಭೇಟಿ ನೀಡಿ ಉಚಿತವಾಗಿ ಇ–ಕೆವೈಸಿ ದೃಢೀಕರಣ ನೀಡಬೇಕು, ಆದರೆ ಇದಕ್ಕೆ ಯಾವುದೇ ಕಾಲಮಿತಿ ಇಲ್ಲ ಮತ್ತು ಇ–ಕೆವೈಸಿಗೆ ಹಣ ನೀಡುವಂತಿಲ್ಲ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕ ಶಿದ್ರಾಮ ಮಾರಿಹಾಳ್ ಅವರು ಸ್ಪಷ್ಟನೆ ನೀಡಿದ್ದಾರೆ.

---

**ಪ್ರಮುಖ ಸುದ್ದಿ**

# ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳಲು ಸಲಹೆ

» ನಾಯಕನಹಟ್ಟಿ

ಕಾಮಗಾರಿಯಲ್ಲಿ ಗುಣಮಟ್ಟವನ್ನು ಕಾಯ್ದುಕೊಳ್ಳುವುದರ ಜೊತೆಗೆ ನಿಗದಿತ ಅವಧಿಯಲ್ಲಿ ಕಟ್ಟಡ ನಿರ್ಮಾಣವನ್ನು ಪೂರೈಸಬೇಕೆಂದು ಶಾಸಕ ಎನ್.ವೈ. ಗೋಪಾಲಕೃಷ್ಣ ಪಿಡಬ್ಲ್ಯುಡಿ ಇಲಾಖೆಯ ಅಧಿಕಾರಿಗಳು, ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಅವರು ಸಮೀಪದ ತಳಕು ಗ್ರಾಮದಲ್ಲಿ ಮಂಗಳವಾರ ನಾಡಕಚೇರಿ ಕಟ್ಟಡಕ್ಕೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.



ತಳಕು ಸಾಹಿತ್ಯ ಕ್ಷೇತ್ರದ ದಿಗ್ಗಜರ ಭೂಮಿಯಾಗಿದೆ. ಇದರ ಅಭಿವೃದ್ಧಿಗೆ ಸದಾ ಸಿದ್ಧನಿದ್ದೇನೆ. ನಾಡ ಕಚೇರಿ ಟಿ.ಎಸ್.ವೆಂಕಣ್ಣಯ್ಯ ಗ್ರಂಥಾಲಯದ ಕಟ್ಟಡದಲ್ಲಿ ತಾತ್ಕಾಲಿಕವಾಗಿ ನಡೆಯುತ್ತಿದೆ. ರೂ.18.84 ಲಕ್ಷ ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿದೆ. ಶೀಘ್ರದಲ್ಲಿ ಕಾಮಗಾರಿ ಆರಂಭಿಸಿ ಗುಣಮಟ್ಟದ ಕಟ್ಟಡವನ್ನು ನಿರ್ಮಿಸಲು ಗುತ್ತಿಗೆದಾರರಿಗೆ ಸೂಚಿಸಿದರು. ನಾಲ್ಕು ತಿಂಗಳಲ್ಲಿ ಕಾಮಗಾರಿಯನ್ನು ಪೂರೈಸುವುದಾಗಿ ಗುತ್ತಿಗೆದಾರರು ಶಾಸಕರಿಗೆ ಮನವರಿಕೆ ಮಾಡಿದರು. ಭೂಮಿ ಪೂಜೆ ಆದ ಸ್ಥಳವು ಇಕ್ಕಟ್ಟಿನಿಂದ ಕೂಡಿದ್ದು, ಮುಂಭಾಗದಲ್ಲಿ ಗೂಡಂಗಡಿಗಳಿವೆ. ಕಾಮಗಾರಿ ನಡೆಸಲು ಅಡ್ಡಿಯಾಗುತ್ತದೆ. ಗೂಡಂಗಡಿ ಮಾಲೀಕರ ಮನವೊಲಿಸಿ ಶೀಘ್ರವೇ ಅವರಿಗೆ ನೋಟೀಸ್ ನೀಡಿ ತೆರವುಗೊಳಿಸಲು ತಹಶೀಲ್ದಾರರು ಮತ್ತು ಗ್ರಾ.ಪಂ.ಯವರಿಗೆ ತಿಳಿಸಿದರು.

ತಳಕು ಗ್ರಾಮದ ಪಕ್ಕದಲ್ಲಿ ಸೇಂದಿ ಖರಾಬು ಜಾಗವಿದೆ. ಅದನ್ನು ವಸತಿ, ನಿವೇಶನ ರಹಿತರಿಗೆ ಹಂಚಿಕೆ ಮಾಡಬೇಕೆಂದು ಗ್ರಾಮಸ್ಥರು ಅಹವಾಲು ಸಲ್ಲಿಸಿದಾಗ, ಶಾಸಕ ಎನ್.ವೈ.ಜಿ., ಸರ್ಕಾರದ ನಿಯಮಾವಳಿ ಪ್ರಕಾರ ಗ್ರಾ.ಪಂ. ಸಭೆಯಲ್ಲಿ ಈ ವಿಷಯ ಇಟ್ಟು ಚರ್ಚಿಸಿ ಇಲ್ಲಿಂದ ಸರ್ಕಾರಕ್ಕೆ ಮನವಿ ಸಲ್ಲಿಸಿ. ಕಂದಾಯ ಇಲಾಖೆಯಲ್ಲಿರುವ ಜಮೀನು ಗ್ರಾ.ಪಂ.ವ್ಯಾಪ್ತಿಗೆ ಬಂದಾಗ ನಿವೇಶನ, ವಸತಿ ರಹಿತರಿಗೆ ಹಂಚಿಕೆ ಮಾಡಲು ಸುಲಭವಾಗುತ್ತದೆ. ಇದರ ಮಧ್ಯೆ ವಸತಿ, ನಿವೇಶನ ರಹಿತರ ಪಟ್ಟಿ ತಯಾರಿ ಮಾಡಿಕೊಳ್ಳಿ ಎಂದು ಗ್ರಾ.ಪಂ.ಅಭಿವೃದ್ಧಿ ಅಧಿಕಾರಿ ಓಬಣ್ಣಗೆ ಸಲಹೆ ನೀಡಿದರು. ತಹಶೀಲ್ದಾರ್ ರೆಹಾನ್‌ಪಾಷ, ಮಾತನಾಡಿ, ಇಲ್ಲಿಂದ ಬರುವ ಯಾವ ಕಡತಗಳನ್ನು ನಿಲ್ಲಿಸುವುದಿಲ್ಲ. ಗ್ರಾ.ಪಂ. ಮೂಲಕ ಅರ್ಜಿ ಸಲ್ಲಿಸಿದರೆ ಅದನ್ನು ಜಿಲ್ಲಾಧಿಕಾರಿ ಮೂಲಕ ಸರ್ಕಾರಕ್ಕೆ ಕಳುಹಿಸಿ ಶಾಸಕರ ಮಾರ್ಗದರ್ಶನದಲ್ಲಿ ವಸತಿ ರಹಿತರಿಗೆ ಕೊಡಲು ಇರುವ ಜಾಗವನ್ನು ಗ್ರಾ.ಪಂ. ಗೆ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಉಪ ತಹಶೀಲ್ದಾರ್ ಅಬ್ದುಲ್ ರಜಾಕ್, ಗ್ರಾ.ಪಂ.ಅಧ್ಯಕ್ಷೆ ದ್ರಾಕ್ಷಾಯಿಣಮ್ಮ ಮಲ್ಲೇಶ್‌ಕುಮಾರ್, ಸದಸ್ಯರುಗಳಾದ ನೀಲಮ್ಮ,ರವಿಚಂದ್ರ, ಗರುಮೂರ್ತಿ,ಕುಮಾರ್. ಪಿಡಬ್ಲ್ಯುಡಿ ಇಲಾಖೆಯ ಎಇಇ ವಿಜಯ್‌ಭಾಸ್ಕರ್, ಸಹಾಯಕ ಇಂಜಿನಿಯರ್ ಜಿಶಾನ್, ಪಿಡಿಒ ಓಬಣ್ಣ, ಮುಖಂಡ ನಾಗೇಶ್‌ರೆಡ್ಡಿ, ರೈತ ಮುಖಂಡರುಗಳಾದ ಆರ್.ಬಿ.ನಿಜಲಿಂಗಪ್ಪ, ತಿಮ್ಮಣ್ಣ, ಮಲ್ಲೇಶಪ್ಪ ಮತ್ತು ಸ್ಥಳೀಯ ಜನಪ್ರತಿನಿಧಿಗಳು, ಮುಖಂಡರುಗಳು ಇದ್ದರು.

ಫಾಸ್ಟ್ ನ್ಯೂಸ್

## ತಾಲ್ಲೂಕು ಮಟ್ಟದ ಅಧಿಕಾರಿಗಳ ವೇತನ ಶ್ರೇಣಿಗೆ ಸರಿ ಸಮನಾಗಿ ಪರಿಷ್ಕರಿಸಿ ಕೊಡಲು ಮನವಿ ಸಲ್ಲಿಕೆ



» **ಬೆಂಗಳೂರು**

ಕರ್ನಾಟಕ ರಾಜ್ಯ ಮೀನುಗಾರಿಕೆ ಇಲಾಖಾ ತಾಂತ್ರಿಕ ಅಧಿಕಾರಿಗಳ ಸಂಘ(ರಿ) ರಿಂದ ಬೆಂಗಳೂರಿನಲ್ಲಿ ಆಯೋಜಿಸಿದ್ದ ವಾರ್ಷಿಕ ಮಹಾಸಭೆಯಲ್ಲಿ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರುಗಳು ತಮ್ಮ ವೇತನ ಶ್ರೇಣಿಯನ್ನು ಇತರ ತಾಲ್ಲೂಕು ಮಟ್ಟದ ಅಧಿಕಾರಿಗಳ ವೇತನ ಶ್ರೇಣಿಗೆ ಸರಿ ಸಮನಾಗಿ ಪರಿಷ್ಕರಿಸಿ ಕೊಡಲು ಮತ್ತು ತಾಲ್ಲೂಕು ಕಛೇರಿಗಳಿಗೆ ಆಡಳಿತಾತ್ಮಕ ಸಿಬ್ಬಂದಿಗಳನ್ನು ಮಂಜೂರು ಮಾಡಿಕೊಡುವಂತೆ ಸರ್ಕಾರದ ಗಮನಕ್ಕೆ ತರಲು ಮನವಿಯನ್ನು ಮೀನುಗಾರಿಕೆ ನಿರ್ದೇಶಕರಾದ ದಿನೇಶ್ ಕಳ್ಳೇರ್ ಮತ್ತು ಸಂಘದ ಅಧ್ಯಕ್ಷರಾದ ಶರಣಬಸವರವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರುಗಳಾದ ಡಾ. ವಿನಯ್.ಎ (ಶಿಕಾರಿಪುರ ತಾ.),ಶ್ರೀ ಮಂಜುನಾಥ್. ಎಸ್(ಹಿರಿಯೂರು ತಾ.),ಶ್ರೀ ಮಹೇಶ್ವರ್. ಕೆ.ಜೆ(ಕೊರಟಗೆರೆ ತಾ),ಶ್ರೀ ಚಂದ್ರಶೇಖರ್ ಕಡೇಮನೆ(ಕೊಪ್ಪಳ ತಾ.),ಶ್ರೀ ಸಚಿನ್.ಎಸ್. ಎಮ್(ಕೊಡಗು),ಶ್ರೀ ಜಗದೀಶ್. ಟಿ.ಡಿ(ಕೆ ಆರ್ ಪೇಟೆ),ಶ್ರೀ ಮಂಜುನಾಥ್ ಕೆ.ಎಸ್(ಜಗಳೂರು ತಾ) ಶ್ರೀ ಮಲ್ಲೇಶ್ ನಾಯ್ಕ.ಆರ್.ಎಸ್( ದಾವಣಗೆರೆ ತಾ.)ಮತ್ತು ಶ್ರೀ ಗೌತಮ್ ಶೀಲ್ (ಬಸವ ಕಲ್ಯಾಣ) ಇತರರು ಉಪಸ್ಥಿತರಿದ್ದರು.

## ಕರಿಬಸವೇಶ್ವರ ಕಾರ್ತಿಕೋತ್ಸವ



» **ನಾಯಕನಹಟ್ಟಿ**

ಹೋಬಳಿಯ ತಿಮ್ಮಪ್ಪಯ್ಯನಹಳ್ಳಿ ಗ್ರಾಮದಲ್ಲಿ ಮಾರ್ಗಶಿರ ಮಾಸದಲ್ಲಿ ಶ್ರೀ ಗುರು ಕರಿಬಸವೇಶ್ವರ ಕಾರ್ತಿಕೋತ್ಸವ ಶುಕ್ರವಾರ ಸಾವಿರಾರು ಭಕ್ತಾಧಿಗಳ ಸಮ್ಮುಖದಲ್ಲಿ ವಿಜ್ರಂಭಣೆಯಿಂದ ನಡೆಯಿತು. ನಂಬಿದವರಿಗೆ ಹಿಂಬು ಕೊಡುವ ಶ್ರೀ ಗುರು ಕರಿಬಸವೇಶ್ವರ ಮಹಿಮೆ ಅಪಾರ, ರಥೋತ್ಸವ ನಡೆಯುವ ಸಂದರ್ಭದಲ್ಲಿ ನಂದಿಕೋಲು, ಕುಣಿತ, ವೀರಗಾಸೆ, ಕೋಲಾಟ, ಗಮನ ಸೆಳೆದವು. ಹಂಪಣ್ಣಜ್ಜನವರ ಮಗ ಹೆಚ್.ಬಿ.ಮಲ್ಲಿಕಾರ್ಜುನ ಅವರ ಪುತ್ರ ಅಭಿಷೇಕ್ 55 ಸಾವಿರ ರೂಗಳಿಗೆ ಮುಕ್ತಿ ಭಾವುಟ ಕೂಗಿಕೊಂಡರು.ಕರಿಬಸವೇಶ್ವರ ಜೈ ಎಂದು ಘೋಷಣೆಗಳನ್ನು ಕೂಗುತ್ತ ರಥೋತ್ಸವ ಮೆರವಣಿಗೆ ಸಾಗಿತು. ಬಸವಣ್ಣ ಗಟ್ಟೆಯವರಿಗೆ ಹೋಗಿ ದೇವಸ್ಥಾನದ ಮುಂಭಾಗಕ್ಕೆ ವಾಪಾಸ್ ಆಯಿತು. ರಥ ಸಾಗುವಾಗ ಅರಿಕೆ ಹೊತ್ತವರು ರಥದ ಮುಂಭಾಗದಲ್ಲಿ ಉರುಳು ಸೇವೆ ಮಾಡಿದರು.ಈ ಸಂದರ್ಭದಲ್ಲಿ ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಕೆಪಿಸಿಸಿ ಸದಸ್ಯರಾದ ಬಾಲರಾಜ, ತಿಮ್ಮಪ್ಪಯ್ಯನಹಳ್ಳಿ ಮಾಜಿ ಗ್ರಾ.ಪಂ ಅಧ್ಯಕ್ಷರಾದ ತಿಪ್ಪೇಸ್ವಾಮಿ (ಕೊಟಪ್ಪ), ದೇವಸ್ಥಾನದ ಕಮಿಟಿ ಅಧ್ಯಕ್ಷರಾದ ರವೀಂದ್ರ, ದೇವಸ್ಥಾನದ ಸದಸ್ಯರು, ಗ್ರಾ.ಪಂ ಸದಸ್ಯರುಗಳು, ಮಾಜಿ ಸದಸ್ಯರುಗಳು, ನಿವೃತ್ತ ಶಿಕ್ಷಕರು, ತಳಕು ಪಿಎಸ್ಐ ಲೋಕೇಶ್, ಹಾಗೂ ಸರ್ವಭಕ್ತಾಧಿಗಳು, ಊರಿನ ಮುಖಂಡರುಗಳು, ಹಟ್ಟಿ ಗ್ರಾಮಸ್ಥರು ಇದ್ದರು.

## ಪಿಎಂ ಆವಾಸ್: 4 ಕೋಟಿಗೂ ಅಧಿಕ ಮನೆಗಳ ನಿರ್ಮಾಣ

» **ಮೊದಲ ಪುಟದಿಂದ**

ಈ ಯೋಜನೆ ದೇಶದಲ್ಲಿ ಬಹುದೊಡ್ಡ ಬದಲಾವಣೆ ತರಲಿದೆ ಎಂದರು. ದಾವಣಗೆರೆ ಸಂಸದರಾದ ಡಾ.ಜಿ.ಎಂ.ಸಿದ್ದೇಶ್ವರ ಮಾತನಾಡಿ, ಕಳೆದ 10 ವರ್ಷಗಳಲ್ಲಿ ಕೇಂದ್ರ ಸರ್ಕಾರ ಕೈಗೊಂಡಿರುವ ಜನಕಲ್ಯಾಣ ಕಾರ್ಯಕ್ರಮಗಳಿಂದ ದೇಶದ ಅಭಿವೃದ್ಧಿಯ ಚಿತ್ರಣ ಬದಲಾಗಿದೆ ಎಂದರು. ಉಜ್ವಲ 2.0 ಯೋಜನೆ ಅಡಿಯಲ್ಲಿ ರಾಜ್ಯದಲ್ಲಿ ಮತ್ತೆ ನಾಲ್ಕು ಲಕ್ಷ ಕುಟುಂಬಗಳಿಗೆ ಉಚಿತ ಅಡುಗೆ ಅನಿಲ ಸಿಲಿಂಡರ್ ವಿತರಣೆ ಮಾಡಲಾಗುತ್ತಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿಹರಿಹರಶಾಸಕಬಿ.ಪಿ.ಹರೀಶ್, ಮಾಜಿ ಶಾಸಕ ಎಸ್.ವಿ.ರಾಮಚಂದ್ರ, ಮಾಜಿ ಮುಖ್ಯ ಸಚೇತಕ ಡಾ.ಎ.ಎಚ್.ಶಿವಯೋಗಿ ಸ್ವಾಮಿ, ಲೀಡ್ ಬ್ಯಾಂಕ್ ಮ್ಯಾನೇಜರ್ ಪ್ರಕಾಶ್ ಇತರರು ಉಪಸ್ಥಿತರಿದ್ದರು.


### ಲಾಭದಾಯಕ ಹೈನುಗಾರಿಕೆ ಕುರಿತ ತರಬೇತಿ ಕಾರ್ಯಕ್ರಮ

# ಉದ್ದಿಮೆ ರೂಪದಲ್ಲಿ ಹೈನುಗಾರಿಕೆ ಕೈಗೊಳ್ಳಿ

» **ಚಿತ್ರದುರ್ಗ**

ಹೈನುಗಾರಿಕೆಯನ್ನು ಲಾಭದಾಯಕವಾಗಿಸಲು ಉದ್ದಿಮೆ ರೂಪದಲ್ಲಿ ಹೈನುಗಾರಿಕೆ ಕೈಗೊಳ್ಳಬೇಕು ಎಂದು ರೈತರಿಗೆ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕ ಆರ್.ರಜನೀಕಾಂತ ಸಲಹೆ ನೀಡಿದರು.

ಹಿರಿಯೂರು ತಾಲ್ಲೂಕು ಬಬ್ಬೂರಿನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಗುರುವಾರ ಆಯೋಜಿಸಲಾಗಿದ್ದ ಲಾಭದಾಯಕ ಹೈನುಗಾರಿಕೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಖರ್ಚು ವೆಚ್ಚವನ್ನು ಲೆಕ್ಕವಿಟ್ಟು ವೈಜ್ಞಾನಿಕವಾಗಿ ಉತ್ತಮ ತಳಿಯ ಹಸು ಎಮ್ಮೆಗಳನ್ನು ಖರೀದಿಸಿ, ಕೊಟ್ಟಿಗೆ ಮತ್ತು ಪೋಷಕಾಂಶ ಮೇವಿನ ನಿರ್ವಹಣೆ ಮಾಡಬೇಕು. ರಾಸುಗಳ ಆರೋಗ್ಯ ನಿರ್ವಹಣೆಯ ಕುರಿತು ರೈತರು ಈ ತರಬೇತಿಯಲ್ಲಿ ನಿಡಲಾಗುವ ಮಾಹಿತಿಯ ಸದುಪಯೋಗ ಪಡೆದುಕೊಳ್ಳಬೇಕು. ಹೈನುಗಾರಿಕೆ ಒಂದು ಪರಿಸರ ಸ್ನೇಹಿ ಕೃಷಿ ಉಪಕಸುಬಾಗಿದ್ದು, ರೈತರ ಆರ್ಥಿಕ ಮಟ್ಟ, ಜನರ ಆರೋಗ್ಯ ಸುಧಾರಿಸುವಲ್ಲಿ ಸಹಕಾರಿಯಾಗಿದ್ದು ರೈತರು ಸ್ವಾವಲಂಬನೆಯ ಜೀವನ ನಡೆಸಲು ಅನುಕೂಲಕರವಾಗಿದೆ ಎಂದರು.



ಭಾರತ ದೇಶವು ಇಡೀ ಪ್ರಪಂಚದಲ್ಲಿ ಹಾಲಿನ ಉತ್ಪಾದನೆಯಲ್ಲಿ ಮುಂದಿದೆ.

ರಾಜಸ್ಥಾನ, ಉತ್ತರಪ್ರದೇಶ, ಮಧ್ಯಪ್ರದೇಶ, ಆಂಧ್ರಪ್ರದೇಶ, ಗುಜರಾತ್ ರಾಜ್ಯಗಳು ದೇಶದ ಒಟ್ಟು ಹಾಲಿನ ಉತ್ಪಾದನೆಯಲ್ಲಿ ಶೇ.50ಕ್ಕಿಂತ ಹೆಚ್ಚಿನ ಹಾಲು ಉತ್ಪಾದಿಸುತ್ತಿವೆ.

ಕರ್ನಾಟಕ ರಾಜ್ಯ 9ನೇ ಸ್ಥಾನದಲ್ಲಿದೆ ಎಂದು ಹೇಳಿದರು.

ರೈತಪರ ಚಿಂತಕ ಹಾಗೂ ನೀರಾವರಿ ಹೋರಾಟಗಾರ ಕಸವನಹಳ್ಳಿ ರಮೇಶ್ ಮಾತನಾಡಿ, ಹಿಂದೆ ಹಸು ಸಾಕಾಣಿಕೆಯು ಕೃಷಿಯಲ್ಲಿ ಅನಿವಾರ್ಯವಾಗಿತ್ತು. ಹೈನುಗಾರಿಕೆಯು ರೈತರ ಜೀವನ ಮಟ್ಟ ಸುಧಾರಿಸಲು ಆಧಾರವಾಗಿದೆ. ಕೋಲಾರದಲ್ಲಿ ಹಸು ಸಾಕಾಣಿಕೆಯಲ್ಲಿ ಅನುಸರಿಸುವ ವೈಜ್ಞಾನಿಕ ಪದ್ಧತಿ ಮತ್ತು ಅಲ್ಲಿನ ಜನರ ಕೃಷಿಯ ಮೇಲಿನ ಬದ್ಧತೆಯನ್ನು ನೋಡಿ ಜಿಲ್ಲೆಯ ರೈತರು ಅದನ್ನು ಅನುಸರಿಸಬೇಕು ಎಂದರು.

ಪಶುಸಂಗೋಪನಾ ಇಲಾಖೆ ನಿವೃತ್ತ ಸಹಾಯಕನಿರ್ದೇಶಕಡಾ.ದೊಡ್ಡಮಲ್ಲಯ್ಯ ಮಾತನಾಡಿ, ಹೈನುಗಾರಿಕೆಯು ರೈತರಿಗೆ ಸದಾ ಚಟುವಟಿಕೆಯಿಂದ ಇರಲು ಸಹಕಾರಿಯಾಗಿದೆ. ರೈತ ಮತ್ತು ಪ್ರಕೃತಿಯ ಭಾಂದವ್ಯವನ್ನು ಬೆಸೆಯುತ್ತದೆ. ಹಸು ಕರುವಿಗೆ ಜನ್ಮ ನೀಡಿದ 3-4 ದಿನಗಳು ಮಹತ್ವದಾಗಿದ್ದು, ಗೀಬಿನ ಹಾಲನ್ನು ಸಂಬಂಧಿಕರಿಗೆ ಗಿಣ್ಣ ಮಾಡಲು ನೀಡುವ ಬದಲು ಹೆಚ್ಚಿನ ಪೋಷಕಾಂಶ ಭರಿತವಾಗಿರುವುದರಿಂದ ಕರುವಿಗೆ ಹೊಟ್ಟೆ ತುಂಬ ಕುಡಿಯಲು ಬಿಡಬೇಕು. ಕರು ಹುಟ್ಟಿದ 2 ತಿಂಗಳು ಕರುವಿಗೆ ತನ್ನ ತಾಯಿಯ ಹಾಲನ್ನು ಚೆನ್ನಾಗಿ ಕುಡಿಯಲು ಬಿಡುವುದರಿಂದ ಅದರ ಬೆಳವಣಿಗೆ ಚೆನ್ನಾಗಿ ಆಗುತ್ತದೆ. ಹೈನುಗಾರಿಕೆಯಲ್ಲಿ ಹುಲ್ಲು, ನೀರು, ಶೇಂಗಾ/ದ್ವಿದಳಧಾನ್ಯದ ಹಿಂಡಿಯನ್ನು ಸಮತೋಲನವಾಗಿ ನಿರ್ವಹಣೆಮಾಡುವವಿಧಾನವನ್ನುರೈತರಿಗೆ ತಿಳಿಸಿದರು. ಸಮತೋಲನ ಆಹಾರವು ಹಸುವಿನ ಆರೋಗ್ಯ ನಿರ್ವಹಣೆಯಲ್ಲಿ ಪ್ರಮುಖ ಪಾತ್ರವಹಿಸಿದೆ. ಲಾಭದಾಯಕ ಹೈನುಗಾರಿಕೆಗೆ ರೈತರು ದಿನನಿತ್ಯ ರಾಸುಗಳ ಜೊತೆ ನಿರಂತರ ಕಾಳಜಿ ಅಗತ್ಯವಿದ್ದು ಇದು ಅವರ ಸಂಸ್ಕೃತಿಯಾಗಬೇಕು ಎಂದು ಅಭಿಪ್ರಯಾಪಟ್ಟರು.

ಹಿರಿಯೂರು ಮುಖ್ಯ ಪಶು ವೈದ್ಯಾಧಿಕಾರಿ ಡಾ. ನಾಗರಾಜ್, ಎಮ್ಮೆ ಮತ್ತು ಹಸುಗಳಲ್ಲಿ ಲಾಭದಾಯಕ ಹೈನುಗಾರಿಕೆಗೆ ಉತ್ತಮ ತಳಿ ಆಯ್ಕೆ ಮಾಡಿಕೊಳ್ಳುವ ಹಲವು ಮಾಹಿತಿಯನ್ನು ನೀಡಿದರು.

ಗಿಡಕ್ಕೆ ನೀರೆರೆಯುವ ಮೂಲಕ ತರಬೇತಿ ಕಾರ್ಯಕ್ರಮಉದ್ಘಾಟನೆಮಾಡಲಾಯಿತು. ಸಹಾಯಕ ಕೃಷಿ ನಿರ್ದೇಶಕಿ ಉಷಾರಾಣಿ ಸ್ವಾಗತಸಿ ಮತ್ತು ನಿರೂಪಣೆ ಮಾಡಿದರು, ಕೃಷಿ ಅಧಿಕಾರಿ ಪವಿತ್ರಾ.ಎಂ.ಜೆ. ರೈತರ ನೊಂದಣಿ ನಿರ್ವಹಿಸಿದರು. ಜಿಲ್ಲೆಯ ವಿವಿಧ ಭಾಗದಿಂದ ಆಗಮಿಸಿದ ರೈತ ಪಶು ಸಾಗಣಿಕೆ ಕುರಿತು ತರಬೇತಿ ಪಡೆದುಕೊಂಡರು. ಬಬ್ಬೂರು ಕೇಂದ್ರದ ಸಿಬ್ಬಂದಿ ಉಪಸ್ಥಿತರಿದ್ದರು.

# ತಂಬಾಕು ಉತ್ಪನ್ನ ಮಾರಾಟ ನಿಯಮ ಉಲಂಘನೆ: 270 ಪ್ರಕರಣ ದಾಖಲು

» **ಚಿತ್ರದುರ್ಗ**

ಹೊಸದುರ್ಗ ತಾಲ್ಲೂಕಿನಲ್ಲಿ ಏಪ್ರಿಲ್‌ನಿಂದ ಡಿಸೆಂಬರ್‌ವರೆಗೆ ಕೋಟ್ಪಾ-2003 ಕಾಯ್ದೆಯ ಉಲಂಘನೆ ಆಧರಿಸಿ ಒಟ್ಟು 270 ಪ್ರಕರಣಗಳನ್ನು ದಾಖಲಿಸಿ ರೂ.27,750 ದಂಡ ವಸೂಲಿ ಮಾಡಲಾಗಿದೆ ಎಂದು ಹೊಸದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ರಾಘವೇಂದ್ರ ಪ್ರಸಾದ್ ಮಾಹಿತಿ ನೀಡಿದರು.

ಹೊಸದುರ್ಗ ತಹಶೀಲ್ದಾರ್‌ರವರ ಕಛೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ತಂಬಾಕು ನಿಯಂತ್ರಣ ಕಾರ್ಯಕ್ರಮ ಅನುಷ್ಠಾನದ ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.

ಹೊಸದುರ್ಗ ತಾಲ್ಲೂಕಿನಲ್ಲಿ 15 ತಂಬಾಕು ದಾಳಿಗಳನ್ನು ನಡೆಸಲಾಗಿದೆ. ಸೆಕ್ಷನ್-4 ಅಡಿಯಲ್ಲಿ 191 ಕೇಸುಗಳನ್ನು ದಾಖಲಿಸಿ ರೂ. 19200 ದಂಡವನ್ನು, ಸೆಕ್ಷನ್-6ಎ ಅಡಿಯಲ್ಲಿ 68 ಕೇಸುಗಳನ್ನು ದಾಖಲಿಸಿ ರೂ. 7150 ದಂಡವನ್ನು ಮತ್ತು ಸೆಕ್ಷನ್-6ಬಿ ಅಡಿಯಲ್ಲಿ 11 ಕೇಸುಗಳನ್ನು ದಾಖಲಿಸಿ ರೂ. 1400 ದಂಡವನ್ನು ವಸೂಲಿ ಮಾಡಿ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿಗಳ ಜಂಟಿ ಖಾತೆಗೆ ಜಮೆ ಮಾಡಲಾಗಿದೆ ಎಂದರು.

ತಾಲ್ಲೂಕು ಶಿರಸ್ತೇದಾರ್ ಎಸ್. ನೇತ್ರಾವತಿ ಸಭೆಯಲ್ಲಿ ಮಾತನಾಡಿ, ತಿಂಗಳಿಗೆ 1 ಅಥವಾ 2 ದಾಳಿಗಳು ಮಾತ್ರ ಆಗುತ್ತಿವೆ. ದಾಳಿಗಳನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಬೇಕು. ತಾಲ್ಲೂಕಿನ ಎಲ್ಲಾ ಸರ್ಕಾರಿ ಕಛೇರಿಗಳನ್ನು ತಂಬಾಕು ಮುಕ್ತ ಕಛೇರಿಗಳಾಗಿ ಮಾಡಬೇಕು. ಗ್ರಾಮೀಣ ಮಟ್ಟದಲ್ಲಿ ತಂಬಾಕು ದಾಳಿಗಳನ್ನು ಕೈಗೊಳ್ಳಬೇಕು. ಪ್ರತಿ ದಿನ ಕಸ ವಿಲೇವಾರಿ ವಾಹನಗಳಲ್ಲಿ ತಂಬಾಕು ನಿಯಂತ್ರಣ ಕುರಿತಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಆಡಿಯೋ ಜಿಂಗಲ್ಸ್‌ಗಳ ಮೂಲಕ ನಗರ ಹಾಗಗೂ ಗ್ರಾಮೀಣ ಪ್ರದೇಶದಲ್ಲಿ ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸಬೇಕು. ಶಾಲೆಗಳ ಸುತ್ತ-ಮುತ್ತ 100 ಗಜದ ವ್ಯಾಪ್ತಿಯಲ್ಲಿ ತಂಬಾಕು ಮಾರಾಟವಾಗುತ್ತಿರುವ ಶಾಲೆಗಳ ಪಟ್ಟಿಯನ್ನು ಮಾಡಿ, ತಂಬಾಕು ದಾಳಿಯನ್ನು ಕೈಗೊಳ್ಳುಬೇಕು. ಪ್ರತಿಯೊಂದು ಶಾಲೆಗಳ ಹತ್ತಿರ ತಂಬಾಕು ಮಾರಾಟವಾಗದಂತೆ ಮತ್ತು ಪ್ರತಿ 3 ತಿಂಗಳಿಗೊಮ್ಮೆ ಶಾಲಾ ತಂಬಾಕು ನಿಯಂತ್ರಣ ಸಭೆಯನ್ನು ನಡೆಸುವಂತೆ ಹಾಗೂ ಎಲ್ಲಾ ಶಾಲೆಗಳನ್ನು ತಂಬಾಕು ಮುಕ್ತ ಶಾಲೆಗಳೆಂದು ಮಾಡುವ ನಿಟ್ಟಿನಲ್ಲಿ ಮುಖ್ಯೋಪಾಧ್ಯಾಯರು ಸೂಕ್ತ ಕ್ರಮ ವಹಿಸಲು ಕ್ಷೇತ್ರ ಶಿಕ್ಷಣಾಧಿಕಾರಿಗೆ ತಿಳಿಸಿದರು. ತಂಬಾಕು ಕಾರ್ಯಾಚರಣೆ ನಡೆಸುವಾಗ ಪೋಲಿಸ್ ಇಲಾಖೆಯವರು ಹೆಚ್ಚಿನ ಸಹಕಾರ ನೀಡಬೇಕು ಎಂದರು.



ಜಿಲ್ಲಾ ಸಲಹೆಗಾರ ಬಿ.ಎಂ ಪ್ರಭುದೇವ್ ಮಾತನಡಿ, ತಾಲ್ಲೂಕು ಮಟ್ಟದ ತಂಬಾಕು ತನಿಖಾ ದಳ ತಂಡವು ಕನಿಷ್ಠ ವಾರಕ್ಕೊಮ್ಮೆಯಾದರೂ ತಂಬಾಕು ದಾಳಿಯನ್ನು ನಡೆಸಬೇಕು. ತಹಶೀಲ್ದಾರ್ ನೇತೃತ್ವದ ತಂಡ ವಾರಕ್ಕೊಮ್ಮೆ ತನಿಖಾ ದಾಳಿ ನಡೆಸಬೇಕೆಂದು ಕೋರಿದರು.

## ಸಾಂಸ್ಕೃತಿಕ ಉತ್ಸವ-ಪ್ರತಿಭಾ ಪುರಸ್ಕಾರ

ದಾವಣಗೆರೆ: ನಗರದ ಪಿ.ಜೆ.ಬಡಾವಣೆಯಲ್ಲಿರುವ ಈಶ್ವರಮ್ಮ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಡಿ.30 ಮತ್ತು 31 ರಂದು ಸಾಂಸ್ಕೃತಿಕ ಉತ್ಸವ ಮತ್ತು ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಯೋಜಿಸಲಾಗಿದೆ. ಡಿ.30ರಂದು ಸಂಜೆ 5.30ಕ್ಕೆ ಸಾಂಸ್ಕೃತಿಕ ಉತ್ಸವ ನಡೆಯಲಿದ್ದು, ಶಾಲಾಡಳಿತ ಮಂಡಳಿ ಕಾರ್ಯದರ್ಶಿ ಎ.ಆರ್.ಉಷಾ ರಂಗನಾಥ್ ಅಧ್ಯಕ್ಷತೆ ವಹಿಸುವರು. ಎಸ್ಪಿ ಉಮಾ ಪ್ರಕಾಶ್, ಅಧ್ಯಕ್ಷೆ ಕೆ.ಆರ್.ಸುಜಾತಾ ಕೃಷ್ಣ, ಖಜಾಂಚಿ ಎ.ಪಿ.ಸುಜಾತಾ, ಸತ್ಯಸಾಯಿ ಸೇವಾ ಸಂಸ್ಥೆ ಜಿಲ್ಲಾಧ್ಯಕ್ಷ ಪ್ರಶಾಂತ ಕುರ್ಡೇಕರ್, ಸಂಚಾಲಕ ಪಾಂಡುರಂಗರಾವ್ ರೇವಣಕರ್, ಪ್ರಾಂಶುಪಾಲ ಕೆ.ಎಸ್.ಪ್ರಭುಕುಮಾರ್, ಉಪಪ್ರಂಶುಪಾಲರಾದ ಜಿ.ಎಸ್.ಶಶಿರೇಖಾ ಭಾಗವಹಿಸಲಿದ್ದಾರೆ.

## ಕುವೆಂಪು ಚಿಂತನೆಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ವಿಶ್ವಮಾನವರಾಗಲು ಸಾಧ್ಯ



» **ದಾವಣಗೆರೆ**

ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ ರಾಷ್ಟ್ರಕವಿ ಕುವೆಂಪುರವರ ಚಿಂತನೆಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ವಿಶ್ವಮಾನವರಾಗಲು ಸಾಧ್ಯ ಎಂದು ಮಾಯಕೊಂಡ ಶಾಸಕರಾದ ಕೆ.ಎಸ್ ಬಸವಂತಪ್ಪ ತಿಳಿಸಿದರು.ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಜರುಗಿದ ವಿಶ್ವ ಮಾನವ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ರಾಷ್ಟ್ರಕವಿ ಕುವೆಂಪುರವರ ಜನ್ಮದಿನವನ್ನು ವಿಶ್ವಮಾನವ ದಿನವನ್ನಾಗಿ ರಾಜ್ಯಾದ್ಯಂತ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಜನರು ವೈಚಾರಿಕವಾಗಿ ಯೋಚಿಸದೆ ಮೌಡ್ಯತೆಕಡೆಗೆ ವಾಲುತ್ತಿದ್ದಾರೆ. ನಮ್ಮ ದೇಶದಲ್ಲಿ ದೇವಸ್ಥಾನ, ಮಸೀದಿ, ಚರ್ಚ್‌ಗಳನ್ನು ವೈಭವೀಕರಿಸದೆ ಶಾಲಾ-ಕಾಲೇಜು ಹಾಗೂ ಆಸ್ಪತ್ರೆಗಳನ್ನು ವೈಭವಿಕರಿಸಿದಾಗ ಮಾತ್ರ ರಾಷ್ಟ್ರ ಅಭಿವೃದ್ಧಿ ಹೊಂದಲು ಸಾಧ್ಯ. ಕುವೆಂಪುರವರನ್ನು ಕೇವಲ ದಿನಾಚರಣೆಗೆ ಮಾತ್ರ ಸೀಮಿತಗೊಳಿಸದೇ ಅವರ ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಒಬ್ಬರು ಇನ್ನೊಬ್ಬರ ಮೇಲೆ ದ್ವೇಷ ಸಾಧಿಸುವುದರಿಂದ ವಿಶ್ವ ಮಾನವರಾಗಲು ಸಾಧ್ಯವಿಲ್ಲ, ಬದಲಾಗಿ ಜೀವನದಲ್ಲಿ ಮಾನವೀಯತೆ ಗುಣಗಳನ್ನು ಅಳವಡಿಸಿಕೊಂಡು ದೊಡ್ಡತನವನ್ನು ತೋರ್ಪಡಿಸಬೇಕಾಗಿದೆ. ಯಾವ ದೇಶ ಮಾನವೀಯತೆಯ ಗುಣಗಳನ್ನು ಅಳವಡಿಸಿಕೊಂಡಿದೆಯೊ ಆ ದೇಶ ಪ್ರಪಂಚದಲ್ಲಿ ಉನ್ನತ ಸ್ಥಾನವನ್ನೇರಲಿದೆ. ಕುವೆಂಪುರವರು ಮೌಢ್ಯತೆಗಳನ್ನು ನಿರ್ಮೂಲನೆ ಮಾಡಲು ಹಲವಾರು ವೈಚಾರಿಕ ಕಾದಂಬರಿ, ಕಾವ್ಯ ಹಾಗೂ ವಿಮರ್ಶಾಕ ರಚನೆಗಳನ್ನು ರಚಿಸಿದರೂ ಸಹ ಪೋಷಕರು ಮಕ್ಕಳನ್ನು ಮೌಢ್ಯತೆ ಕಡೆಗೆ ತಳ್ಳುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ ಎಂದರು.

ಪ್ರಮುಖ ಸುದ್ದಿ

# ಮಾರಿಕಾಂಬಾ ದೇವಸ್ಥಾನ ನಿರ್ಮಾಣದ ಪ್ರತಿಷ್ಠಾ ಬ್ರಹ್ಮಕಳಶೋತ್ಸವ

» **ಚಿತ್ರದುರ್ಗ**

ಬರಗಾಲದಂತ ಕಷ್ಟದಲ್ಲಿದ್ದರು ಗ್ರಾಮಸ್ಥರು ದೇವಸ್ಥಾನಕ್ಕಾಗಿ 55 ಲಕ್ಷ ರೂ.ಗಳನ್ನು ನೀಡಿರುವುದು ದೇವರ ಮೇಲಿರುವ ಭಕ್ತಿಯನ್ನು ತೋರಿಸುತ್ತದೆ. ನಿಷ್ಠೆ ಪ್ರಾಮಾಣಿಕತೆಯಿಂದ ದೇವರ ಸೇವೆ ಮಾಡಿದರೆ ಫಲಾಪೇಕ್ಷೆ ಕೊಡುತ್ತಾನೆಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಗ್ರಾಮದ ಜನತೆಯ ಉದಾರತೆಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಹೊಳಲ್ಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಭರಮಸಾಗರ ಹೋಬಳಿ ಚಿತ್ರದುರ್ಗ ತಾಲ್ಲೂಕಿನ ಯಳಗೋಡು ಗ್ರಾಮದಲ್ಲಿ ಮಾರಿಕಾಂಬಾ ದೇವಸ್ಥಾನದ ಗರ್ಭಗುಡಿ ಹಾಗೂ ನೂತನ ದೇವಸ್ಥಾನ ನಿರ್ಮಾಣದ ಪ್ರತಿಷ್ಟಾ ಬ್ರಹ್ಮಕಳಶೋತ್ಸವ ಉದ್ಘಾಟಿಸಿ ಮಾತನಾಡಿದರು. 35 ವರ್ಷಗಳಿಂದ ಈ ಭಾಗದಲ್ಲಿ ಓಡಾಡಿಕೊಂಡಿದ್ದೇನೆ. ನಿಮ್ಮೆಲ್ಲರ ಆಶೀರ್ವಾದದಿಂದ ಐದನೆ ಬಾರಿ ಶಾಸಕನಾಗಿದ್ದೇನೆ. ಎಷ್ಟು ದಿನ ಬದುಕಿದ್ದೇವೆನ್ನುವುದು ಮುಖ್ಯವಲ್ಲ.



ಯಳಗೋಡಿನಲ್ಲಿ ಮಾರಿಕಾಂಬಾ ದೇವಸ್ಥಾನ ಗರ್ಭಗುಡಿ ಹಾಗೂ ನೂತನ ದೇವಸ್ಥಾನ ನಿರ್ಮಾಣದ ಪ್ರತಿಷ್ಠಾ ಬ್ರಹ್ಮಕಳಶೋತ್ಸವವನ್ನು ಶಾಸಕ ಡಾ.ಎಂ.ಚಂದ್ರಪ್ಪ ಉದ್ಘಾಟಿಸಿದರು.

ಅಧಿಕಾರವಿದ್ದಾಗ ಹತ್ತಾರು ಜನ ಮೆಚ್ಚುವ ರೀತಿಯಲ್ಲಿ ಗುರುತವಾದ ಕೆಲಸ ಮಾಡಬೇಕು.ಇಲ್ಲಿನಕೆರೆಗೆನೀರುತುಂಬಿಸುವ ಮುನ್ನ ಕೆರೆಯನ್ನು ಬಂದೋಬಸ್ತ್ ಮಾಡಿಸಿದ್ದೇನೆ. ಐದುನೂರು ವರ್ಷಗಳ ಕಾಲ ಭದ್ರವಾಗಿರುವಂತೆ ಯಳಗೋಡು ಗ್ರಾಮಸ್ಥರೆಲ್ಲಾ ಸೇರಿಕೊಂಡು ಮಾರಿಕಾಂಬ ದೇವಸ್ಥಾನ ನಿರ್ಮಾಣ ಮಾಡಿದ್ದೀರಿ. ಮಾರಿಕಾಂಬಾದೇವಿ ಕಣ್ಣು ಬಿಟ್ಟರೆ ಯಾರು ಉಳಿಯಲ್ಲ. ಸಿಟ್ಟಿನ ದೇವತೆ. ಜೀವನದಲ್ಲಿ ಯಾರಿಗೂ ಒಳ್ಳೆಯದು ಮಾಡದಿದ್ದರೂ ಪರವಾಗಿಲ್ಲ. ಕೆಟ್ಟದ್ದು ಮಾತ್ರ ಬಯಸಬಾರದು. ಈ ಭಾಗದ ಎಲ್ಲಾ ರೈತರಿಗೆ ಅನುಕೂಲವಾಗಂತ ಕೆಲಸಗಳನ್ನು ಮಾಡಿದ್ದೇನೆ. ಆಸ್ಪತ್ರೆ, ರಸ್ತೆ, ಶಾಲಾ, ಕಾಲೇಜು ನಿರ್ಮಿಸಲಾಗಿದೆ. ಹೊಳಲ್ಕೆರೆ ಕ್ಷೇತ್ರದಲ್ಲಿ ಪ್ರತಿ ಮನೆ ಮನೆಗೆ ಶುದ್ದ ಕುಡಿಯುವ ನೀರು ಒದಗಿಸಲಾಗಿದೆ. ಬರಗಾಲದಲ್ಲಿದ್ದರೂ ಯಳಗೋಡಿನ ದೇವಸ್ಥಾನಕ್ಕಾಗಿ ಜನ ದೊಡ್ಡ ಪ್ರಮಾಣದಲ್ಲಿ ಹಣದ ಸಹಾಯ ಮಾಡಿದ್ದಾರೆ. ಭದ್ರಾ ಯೋಜನೆಯಿಂದ ಈ ಕೆರೆಗೆ ಸಂಪರ್ಕ ಕಲ್ಪಿಸಿ ಸದಾ ನೀರಿನಿಂದ ತುಂಬಿ ತುಳುಕುವಂತ ವ್ಯವಸ್ಥೆ ಮಾಡಲಾಗಿದೆ. ಅಧಿಕಾರ ಶಾಶ್ವತವಲ್ಲ. ಮಾಡಿದ ಸಣ್ಣಪುಟ್ಟ ಅಳಿಲು ಸೇವೆಯೇ ಶಾಶ್ವತ ಎಂದು ಹೇಳಿದರು.ಬ್ರಹ್ಮಕುಂಭಾಭಿಷೇಕ, ಚಂಡಿಕಾ ಹೋಮ ನೆರವೇರಿಸಲಾಯಿತು. ಮಾರಿಕಾಂಬಾ ದೇವಸ್ಥಾನದ ಅಧ್ಯಕ್ಷ ಜಿ.ಕೆ. ಮುರಿಗೆಪ್ಪ, ಉಪಾಧ್ಯಕ್ಷ ಎಂ.ಡಿ.ಬಸಪ್ಪ, ಕಾರ್ಯದರ್ಶಿ ಬಿ.ಟಿ.ನಾರಾಯಣಸ್ವಾಮಿ, ಖಜಾಂಚಿ ಡಿ.ಜಿ.ಪ್ರಭಾಕರ್, ಸದಸ್ಯರುಗಳಾದ ಬಿ.ನಾಗರಾಜಯ್ಯ, ಶ್ರೀಮತಿ ಪಾರ್ವತಮ್ಮ, ಎಂ.ಜೆ.ಮುರಿಗೇಶ್, ಜಿ.ಎಲ್.ಕಲ್ಲೇಶ್, ಡಿ.ತಿಪ್ಪೇಸ್ವಾಮಿ, ಟಿ.ಎಂ.ಬೋರಪ್ಪ, ಕಾಕಬಾಳು ಪರುಸಪ್ಪ, ಜಿ.ಎಸ್.ಕಲ್ಲೇಶ್, ಎನ್.ಸಿ.ಹನುಮಂತಪ್ಪ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ಅನಿತಾ ಎಸ್. ನಾಗರಾಜ್, ಟಿ.ನಾರಾಯಣಸ್ವಾಮಿ,ಗ್ರಾಮಪಂಚಾಯಿತಿ ಉಪಾಧ್ಯಕ್ಷರು, ಸದಸ್ಯರುಗಳು ಪ್ರತಿಷ್ಟಾ ಬ್ರಹ್ಮಕಳಶೋತ್ಸವದಲ್ಲಿ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T